ಸಂಪುಟ: 11 ಸಂಚಿಕೆ: 198 ಪುಟ: 4+2 ಬೆಲೆ : 3.00 ಶುಕ್ರವಾರ, ಸೆಪ್ಟೆಂಬರ್ 11, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ





Volume : 11 Issue : 198 Pages : 4+2 Rate : 3.00 Friday, September 11, 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಕನಿಷ್ಠ ವೇತನ ಸೇವಾ ಭದ್ರತೆಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

# ಬೇಡಿಕೆಗಳಿಗಾಗಿ ಬೀದಿಗಿಳಿದ ಪೌರ ಕಾರ್ಮಿಕರು




**ವಿಜಯಸಾಕ್ಷಿ ಸುದ್ದಿ, ಗದಗ**

ಕನಿಷ್ಠ ವೇತನ ಜಾರಿ, ಸೇವೆ ಕಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗದಗ-ಬೆಟಗೇರಿ ನಗರಸಭೆಯ ಮಹಿಳಾ ಪೌರ ಕಾರ್ಮಿಕರು ಗುರುವಾರ ನಗರದ ಗಾಂಧಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ಹಲವು ದಿನಗಳಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವ ಕಾರ್ಮಿಕರು, ಸರ್ಕಾರ ಹಾಗೂ ಜಿಲ್ಲಾಡಳಿತ ತಮ್ಮ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು. ನಗರ ಸ್ವಚ್ಛತೆಗಾಗಿ ಹಲವು ವರ್ಷಗಳಿಂದ ದುಡಿಯುತ್ತಿದ್ದರೂ ಕನಿಷ್ಠ ವೇತನ ಸೇರಿದಂತೆ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದೇವೆ. ದುಡಿಮೆಗೆ ತಕ್ಕ ವೇತನ ಹಾಗೂ ಸೇವಾ ಭದ್ರತೆ ನೀಡುವಂತೆ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ದೂರಿದರು.

ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದ ಮಹಿಳಾ ಪೌರ ಕಾರ್ಮಿಕರು ರಸ್ತೆ ತಡೆ ನಡೆಸಿ ರಾಜ್ಯ ಸರ್ಕಾರ, ಜಿಲ್ಲಾಡಳಿತ ಹಾಗೂ ನಗರಸಭೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸುಮಾರು ಒಂದೂವರೆ ಗಂಟೆಗೂ ಹೆಚ್ಚು ಕಾಲ ರಸ್ತೆ ತಡೆ ನಡೆಸಿದ್ದರಿಂದ ಪ್ರಮುಖ ವೃತ್ತದಲ್ಲಿ ವಾಹನ ಸಂಚಾರ ಅಸ್ತವ್ಯಸ್ತಗೊಂಡು ವಾಹನ ಸವಾರರು ಪರದಾಡುವಂತಾಯಿತು. ಕೆಲಕಾಲ ಸಂಚಾರ ದಟ್ಟಣೆಯೂ ಉಂಟಾಯಿತು.

ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸುತ್ತಿದ್ದ ವೇಳೆ ಮಹಿಳಾ ಪೌರ ಕಾರ್ಮಿಕ ಜ್ಯೋತಿ ಹೊಸಳ್ಳಿ ಏಕಾಏಕಿ ಕುಸಿದು ಬಿದ್ದರು. ಅಸ್ವಸ್ಥಗೊಂಡ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ತಕ್ಷಣ ಆ್ಯಂಬುಲೆನ್ಸ್‌ಗೆ ಕರೆ ಮಾಡಲಾಯಿತು. ಆದರೆ, ಆ್ಯಂಬುಲೆನ್ಸ್ ಸ್ಥಳಕ್ಕೆ ಆಗಮಿಸುವುದು ವಿಳಂಬವಾದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

'ಬಡ ಕಾರ್ಮಿಕರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಬೇಕು. ನಮ್ಮ ದುಡಿಮೆಗೆ ತಕ್ಕ ಕನಿಷ್ಠ ವೇತನ ಹಾಗೂ ಸೇವಾ ಭದ್ರತೆ ನೀಡಬೇಕು. ಪ್ರತಿಭಟನೆ ವೇಳೆ ಅಸ್ವಸ್ಥಗೊಂಡ ಕಾರ್ಮಿಕ ಮಹಿಳೆಯನ್ನು ಆಸ್ಪತ್ರೆಗೆ ಕರೆದೊಯ್ಯಲು ಆ್ಯಂಬುಲೆನ್ಸ್ ಕೂಡ ತಡವಾಗಿರುವುದು ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ' ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಜ್ಯೋತಿ ಹೊಸಳ್ಳಿ ಅವರನ್ನು ಜಿಲ್ಲಾ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲಾಯಿತು. ತಮ್ಮ ಬೇಡಿಕೆಗಳ ಕುರಿತು ಹಿರಿಯ ಅಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಸ್ಪಷ್ಟ ಭರವಸೆ ನೀಡಬೇಕು ಎಂದು ಕಾರ್ಮಿಕರು ಪಟ್ಟು ಹಿಡಿದರು. ಬಳಿಕ ಸ್ಥಳಕ್ಕೆ ನಗರಸಭೆ ಕಮಿಷನರ್ ರಾಜಾರಾಂ ಪವಾರ ಆಗಮಿಸಿದಾಗ, ಹಲವು ವರ್ಷಗಳಿಂದ ಸಮಸ್ಯೆ ಎದುರಿಸುತ್ತಿದ್ದರೂ ಸೂಕ್ತ ಕ್ರಮ ಕೈಗೊಳ್ಳದಿರುವುದಕ್ಕೆ ಕಾರ್ಮಿಕರು ಅವರನ್ನು ತರಾಟೆಗೆ ತೆಗೆದುಕೊಂಡರು.

ಪ್ರತಿಭಟನಾಕಾರರ ಮನವಿ ಸ್ವೀಕರಿಸಿದ ಕಮಿಷನರ್, ಕಾರ್ಮಿಕರ ಬೇಡಿಕೆಗಳನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಬಳಿಕ ಕಾರ್ಮಿಕರು ಪ್ರತಿಭಟನೆ ಹಾಗೂ ರಸ್ತೆ ತಡೆ ಕೈಬಿಟ್ಟರು.

ಪ್ರತಿಭಟನೆಯಲ್ಲಿ ನಗರಸಭೆ ಸದಸ್ಯರಾದ ಕೃಷ್ಣಾ ಪರಾಪೂರ, ಅಶೋಕ ಕುಡತಿನ್ನಿ, ಗಣೇಶ ಹುಬ್ಬಳ್ಳಿ, ಎಸ್.ಎನ್. ಬಳ್ಳಾರಿ ಸೇ-ರಿದಂತೆ ಹಲವರು ಪಾಲ್ಗೊಂಡಿದ್ದರು.

### ಧರಣಿ ಸ್ಥಳಕ್ಕೆ ಶಾಸಕ ಎಚ್.ಕೆ. ಪಾಟೀಲ ಭೇಟಿ

**ನಗರಸಭೆ ಎದುರು ಮಹಿಳಾ ಪೌರ ಕಾರ್ಮಿಕರು ನಡೆಸುತ್ತಿರುವ ಧರಣಿ ಸ್ಥಳಕ್ಕೆ ಶಾಸಕ ಎಚ್. ಕೆ. ಪಾಟೀಲ ಭೇಟಿ ನೀಡಿ ಕಾರ್ಮಿಕರ ಸಮಸ್ಯೆಗಳನ್ನು ಆಲಿಸಿದರು. ಕಾರ್ಮಿಕರ ನ್ಯಾಯಯುತ ಬೇಡಿಕೆಗಳ ಕುರಿತು ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದು ಭರವಸೆ ನೀಡಿದರು.**

## ರಾಜ್ಯ ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ವಿಜಯಲಕ್ಷ್ಮಿ ಅಕ್ಕಿ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ಶಿರಹಟ್ಟಿ ತಾಲೂಕಿನ ಮಾಗಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯ ಸಹ ಶಿಕ್ಷಕಿ ವಿಜಯಲಕ್ಷ್ಮಿ ಅಕ್ಕಿ ಅವರು ಶೈಕ್ಷಣಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆ ಹಾಗೂ ಸಾಧನೆಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ರೋಣ ತಾಲೂಕಿನ ಹೊಳೆಆಲೂರ ಎಸ್‌ಎಸ್‌ಆರ್‌ಡಿನ ಜನಸೇವಾ ಸಂಸ್ಥೆ (ರಿ) ವತಿಯಿಂದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ ಆಚರಿಸಲಾಗುವ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಸೆ.12ರಂದು ಗದಗದ ಜೆ.ಟಿ. ಮಹಾವಿದ್ಯಾಲಯದ ಸಭಾಭವನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ವಿಜಯಲಕ್ಷ್ಮಿ ಅಕ್ಕಿ ಅವರಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

## ಬಿಜೆಪಿಗೆ ಶಂಕ್ರಣ್ಣ ಕಾಳೆ ರಾಜೀನಾಮೆ!

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**



ಬಿಜೆಪಿಯಲ್ಲಿ ಹಿರಿಯ ಹಾಗೂ ನಿಷ್ಠಾವಂತ ಕಾರ್ಯಕತರಿಗೆ ಗೌರವ, ಬೆಲೆ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿರುವ ಬಿಜೆಪಿ ಹಿರಿಯ ಮುಖಂಡ ಹಾಗೂ ಗ್ರಾಪಂ ಮಾಜಿ ಸದಸ್ಯ ರಾಮಗೇರಿಯ ಶಂಕ್ರಣ್ಣ ಕಾಳೆ, ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಹೊರಬರುವುದಾಗಿ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ, ಹಲವು ವರ್ಷಗಳಿಂದ ಪಕ್ಷ ಸಂಘಟನೆ ಹಾಗೂ ಜನಪರ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದು, ಪಕ್ಷ ನೀಡಿದ ಅವಕಾಶದ ಅವಧಿಯಲ್ಲಿ ಹಲವು ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದೇನೆ. ಗ್ರಾಮದಲ್ಲಿ ದೇವಸ್ಥಾನಗಳ ನಿರ್ಮಾಣ ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಪಕ್ಷ ಸಂಘಟನೆಗೆ ಶ್ರಮಿಸಿದ್ದೇನೆ ಎಂದು ತಿಳಿಸಿದ್ದಾರೆ.

ಆದರೆ ಇತ್ತೀಚಿನ ವರ್ಷಗಳಲ್ಲಿ ತಮ್ಮಂತಹ ಹಿರಿಯ, ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಲಾಗುತ್ತಿದೆ. ಪಕ್ಷದ ಸಿದ್ಧಾಂತ ಹಾಗೂ ಸಂಘಟನೆಗಾಗಿ ಪ್ರಾಮಾಣಿಕವಾಗಿ ದುಡಿದವರಿಗೆ ಬೆಲೆ ಇಲ್ಲದಂತಾಗಿದೆ. ಇದ-ರಿಂದ ಮನನೊಂದು ಪಕ್ಷ ತೊರೆಯುವ ನಿರ್ಧಾರ ಕೈಗೊಂಡಿದ್ದೇನೆ ಎಂದು ಶಂಕ್ರಣ್ಣ ಕಾಳೆ ತಿಳಿಸಿದ್ದಾರೆ.

## ನಾಳೆ ಬೆಟಗೇರಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸೆ. 12ರಂದು ಬೆಳಿಗ್ಗೆ 10ರಿಂದ ಮಧ್ಯಾಹ್ನ 2ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಈ ಅವಧಿಯಲ್ಲಿ 110 ಕೆವ್ಹಿ ಬೆಟಗೇರಿ ಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಎಲ್ಲ ನಗರ ಹಾಗೂ ಗ್ರಾಮೀಣ ಪ್ರದೇಶಗಳ 11 ಕೆವ್ಹಿ ವಿತರಣಾ ಮಾರ್ಗಗಳು, ಎನ್.ಜೆ.ವೈ., ಸೋಲಾರ್, ಕೆಐಎಡಿಬಿ ಕೈಗಾರಿಕಾ ಹಾಗೂ ಈಐಪಿ ಫೀಡರ್‌ಗಳ ಗ್ರಾಹಕ-ರಿಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಬರ ಘೋಷಣೆಗೆ ರೈತರ ಪಾದಯಾತ್ರೆ: ಸರ್ಕಾರಕ್ಕೆ ಗಡುವು

**ವಿಜಯಸಾಕ್ಷಿ ಸುದ್ದಿ, ಮುಳಗುಂದ**




ಗದಗ ಜಿಲ್ಲೆಯಲ್ಲಿ ಭೀಕರ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಗದಗ ತಾಲೂಕನ್ನು ಬರಪೀಡಿತ ಎಂದು ಘೋಷಿಸಿ, ರೈತರ ಸಂಕಷ್ಟಕ್ಕೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಆಗ್ರಹಿಸಿ ಮುಳಗುಂದ ಹಸಿರು ಸೇನೆ ರೈತ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಗವಿಮಠದಿಂದ ಕಂದಾಯ ಇಲಾಖೆವರೆಗೆ ಪಾದಯಾತ್ರೆ ನಡೆಸಿದ ರೈತರು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಬಳಿಕ ಕಂದಾಯ ಇಲಾಖೆ ಎದುರು ಪ್ರತಿಭಟನೆ ನಡೆಸಿ ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಅವರಿಗೆ ಮನವಿ ಸಲ್ಲಿಸಿದರು.

ಗದಗ ತಾಲೂಕನ್ನು ಸಂಪೂರ್ಣ ಬರಪೀಡಿತ ಎಂದು ಘೋಷಿಸಬೇಕು. ರೈತರಿಗೆ ಬೆಳೆ ವಿಮೆ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡಬೇಕು. ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿನ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಹಾಗೂ ಜಾನುವಾರುಗಳಿಗೆ ಅಗತ್ಯ ಮೇವು ಒದಗಿಸಬೇಕು ಎಂದು ರೈತರು ಒತ್ತಾಯಿಸಿದರು. ಬೇಡಿಕೆ ಈಡೇರಿಸದಿದ್ದರೆ ರಸ್ತೆ ಬಂದ್ ಮಾಡಿ ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಮಲ್ಲಯ್ಯ ಕೊರವನವರ ಮಾತನಾಡಿ, ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ಬರ ಪರಿಸ್ಥಿತಿಯ ಮಾಹಿತಿಯನ್ನು ಈಗಾಗಲೇ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಬರ ಘೋಷಣೆಯಾಗುವ ಸಾಧ್ಯತೆ ಇದೆ ಎಂದರು.

ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಮನವಿ ಸ್ವೀಕರಿಸಿ, ಬರ ಪರಿಸ್ಥಿತಿ ಕುರಿತು ಸಮೀಕ್ಷೆ ನಡೆಸಿ ಮೇಲಧಿಕಾ-ರಿಗಳಿಗೆ ಮಾಹಿತಿ ನೀಡಲಾಗಿದೆ. ಶೀಘ್ರದಲ್ಲೇ ಬರಪೀಡಿತ ತಾಲೂಕು ಘೋಷಣೆಯಾಗುವ ನಿರೀಕ್ಷೆಯಿದೆ ಎಂದರು.

ಪ್ರತಿಭಟನೆಯಲ್ಲಿ ರೈತ ಸಂಘದ ಅಧ್ಯಕ್ಷ ದೇವಪ್ಪ ಅಣ್ಣಿಗೇರಿ, ಕಿರಣ ಕುಲಕರ್ಣಿ, ಬಸವರಾಜ ಕರಿಗಾರ, ದೇವರಾಜ ಸಂಗನಪೇಟಿ, ಮಹಾಂತೇಶ ಗುಂಜಳ, ಮುತ್ತಪ್ಪ ಪಲ್ಲೇದ, ಮುತ್ತಪ್ಪ ಬಳ್ಳಾರಿ, ಶಂಕ್ರಪ್ಪ ಹಿರೇಮಠ, ಲಕ್ಷ್ಮಣ ಹೊರಪೇಟಿ, ಮಹಾದೇವಪ್ಪ ಮಾನೇಗಾರ ಸೇರಿದಂತೆ ರೈತ ಸಂಘದ ಸದಸ್ಯರು ಪಾಲ್ಗೊಂಡಿದ್ದರು.

> **ಬರ ಪರಿಸ್ಥಿತಿ ಕುರಿತು ಈಗಾಗಲೇ ಸಮೀಕ್ಷೆ ನಡೆಸಲಾಗಿದ್ದು, ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗಿದೆ. ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ನಿರೀಕ್ಷೆಯಿದೆ.**
> **- ಶ್ರೀನಿವಾಸಮೂರ್ತಿ ಕುಲಕರ್ಣಿ, ತಹಸೀಲ್ದಾರ್.**

# ಸೆ.13ರಂದು ಐಎಂಎ ಶತಮಾನೋತ್ಸವ ಸಂಭ್ರಮ




**ವಿಜಯಸಾಕ್ಷಿ ಸುದ್ದಿ, ಗದಗ**

ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ (ಐಎಂಎ) ಶತಮಾನೋತ್ಸವ ಸಂಭ್ರಮವನ್ನು ಸೆ.13ರಂದು ನಗರದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆಡಿಟೋರಿಯಂ ಹಾಲ್‌ನಲ್ಲಿ ಆಯೋಜಿಸಲಾಗಿದೆ ಎಂದು ಐಎಂಎ ಅಧ್ಯಕ್ಷ ಡಾ. ಶ್ರೀಧರ ಕುರಡಗಿ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮಕ್ಕೆ ಆರೋಗ್ಯ ಸಚಿವ ಯು.ಟಿ. ಖಾದರ್ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಡಾ. ಆರ್.ವಿ. ಅಶೋಕನ್ ಹಾಗೂ ಡಾ. ವೀರಭದ್ರಯ್ಯ ಟಿ.ಎ. ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಶಾಸಕ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಶತಮಾನೋತ್ಸವದ ಅಂಗವಾಗಿ ಜಿಲ್ಲೆಯ 100 ಶಾಲೆಗಳಿಗೆ ಚಿಕಿತ್ಸಾ ಪೆಟ್ಟಿಗೆಗಳನ್ನು ವಿತರಿಸಲಾಗುವುದು. ಈಗಾಗಲೇ ಮಹಿಳಾ ವೈದ್ಯರ ತಂಡ ಹಲವು ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಆರೋಗ್ಯದ ಕುರಿತು ಮಾಹಿತಿ ಹಾಗೂ ಅರಿವು ಮೂಡಿಸಿದೆ ಎಂದು ತಿಳಿಸಿದರು.

# ವಕ್ಫ್ ಮಂಡಳಿ ಅಧ್ಯಕ್ಷಗಿರಿಗೆ ಮಹಬೂಬ್ ಬಾದಷಾ ಖಾಜಿ ನೇಮಕಕ್ಕೆ ಮಹಾಸಭಾದಿಂದ ಲಾಬಿ!



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆಯ ನಿವೃತ್ತ ನೌಕರ ಮಹಬೂಬ್ ಬಾದಷಾ ಖಾಜಿ ಅವರನ್ನು ಜಿಲ್ಲಾ ವಕ್ಫ್ ಮಂಡಳಿಯ ಅಧ್ಯಕ್ಷರನ್ನಾಗಿ ನೇಮಕ ಮಾಡುವಂತೆ ಆಗ್ರಹಿಸಿ ಮುಸ್ಲಿಂ ಮಹಾಸಭಾ ಜಿಲ್ಲಾ ಘಟಕದ ವತಿಯಿಂದ ಶಾಸಕ ಡಾ. ಎಚ್.ಕೆ. ಪಾಟೀಲ ಅವರಿಗೆ ಮನವಿ ಸಲ್ಲಿಸಲಾಯಿತು.

ಮಹಬೂಬ್ ಬಾದಷಾ ಖಾಜಿ ಅವರ ಸೇವಾ ಮನೋಭಾವ ಹಾಗೂ ಸಂಘಟನಾ ಕ್ಷಮತೆಯನ್ನು ಪರಿಗಣಿಸಿ, ಜಿಲ್ಲಾ ವಕ್ಫ್ ಮಂಡಳಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ನೀಡುವಂತೆ ನಿಯೋಗವು ಎಚ್.ಕೆ. ಪಾಟೀಲರಿಗೆ ಮನವಿ ಮಾಡಿತು.

ಈ ಸಂದರ್ಭದಲ್ಲಿ ಮುಸ್ಲಿಂ ಮಹಾಸಭಾ ಜಿಲ್ಲಾಧ್ಯಕ್ಷ ಜಾಫರ್ ಡಾಲಾಯತ್, ಮಹಬೂಬ್ ಬಾದಷಾ ಖಾಜಿ, ಪ್ರಧಾನ ಕಾರ್ಯದರ್ಶಿಗಳಾದ ರಿಯಾಜ್ ಅಹ್ಮದ್ ದೊಡ್ಡಮನಿ, ಕುತುಬುದ್ದೀನ್ ಶೇಖ, ಪ್ರಮುಖರಾದ ಡಾ. ಅಬ್ದುಲರಜ್ಜಾಕ ಮಂಗಳೂರು, ರಫೀಕ್ ಈಟಿ, ಸಲೀಂ ಕರಡಿ, ಜೋಹರ ಮುಂಡರಗಿ, ಇಮ್ರಾನ್ ತಹಶೀಲ್ದಾರ್, ಮೀರಾಸಾಬ ಇರಕಲ್, ಅಬ್ದುಲ್ ಖಾದರ್ ಬನ್ನೂರ್, ತಾಜುದ್ದೀನ್ ಖಾಜಿ, ವಸೀಮ್ ಖಾಜಿ, ನಿಜಾಮುದ್ದೀನ್ ಕಾಟಾಪುರ, ಜಿಲಾನಿ ಬನ್ನೂರ್, ಅಸ್ಲಂ, ಸಲೀಂ ಅಹ್ಮದ ನವಲಗುಂದ, ರಹೀಂಸಾಬ್ ದೊಡ್ಡಮನಿ, ಗೌಸಸಾಬ್ ಚವಡಿ, ಸಲೀಂ ಅಹ್ಮದ ಮುಲ್ಲಾ, ಅಸ್ಲಂ ಖಾಜಿ, ತಾಹಿರ್ ಶೇಖ, ಬಾಶು ಖಾಜಿ, ನಾಗರಾಜ್ ಯರಗುಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ, ಎದುರಿಸುವ ಕೌಶಲ್ಯ ಬೆಳೆಸಿಕೊಳ್ಳಿ: ಎಸ್.ಡಿ. ಬೆನ್ನೂರ

# ಜೀವನ ಆಯ್ದುಕೊಳ್ಳಿ, ಆತ್ಮಹತ್ಯೆಯನ್ನಲ್ಲ

**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಮಾನವ ಜೀವನ ಅತ್ಯಮೂಲ್ಯವಾದದ್ದು. ಯಾವುದೇ ಕಾರಣಕ್ಕೂ ಅದನ್ನು ಹಾಳು ಮಾಡಿಕೊಳ್ಳದೆ, ಆತ್ಮಹತ್ಯೆಯಂತಹ ದುರಾಲೋಚನೆಗಳಿಂದ ದೂರವಿದ್ದು ಬದುಕನ್ನು ಆಯ್ದುಕೊಳ್ಳಬೇಕು ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು.



ಗಜೇಂದ್ರಗಡ ಸಮೀಪದ ಸೂಡಿ ಗ್ರಾಮದ ಶ್ರೀ ಗುರು ವಿಜಯ ಮಹಾಂತೇಶ ಪದವಿ ಮಹಾವಿದ್ಯಾಲಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ, ಜಿಲ್ಲಾ ಮಾಹಿತಿ ಶಿಕ್ಷಣ ಸಂವಹನ ವಿಭಾಗ, ಗದಗ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ರೋಣ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಶ್ರೀ ಗುರು ವಿಜಯ ಮಹಾಂತೇಶ ಪದವಿ ಮಹಾವಿದ್ಯಾಲಯ, ಸೂಡಿ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ದಾಸವರೇಣ್ಯರು ಮಾನವ ಜನ್ಮ ಅತ್ಯಮೂಲ್ಯವಾದದ್ದು ಎಂಬುದನ್ನು ತಮ್ಮ ಕೀರ್ತನೆಗಳ ಮೂಲಕ ಸಾರಿದ್ದಾರೆ. ಆದರೆ ಜಾಗತೀಕರಣದ ಪರಿಣಾಮವಾಗಿ ಮನುಷ್ಯನ ಜೀವನದಲ್ಲಿ ವಿವಿಧ ರೀತಿಯ ಒತ್ತಡಗಳು ಹೆಚ್ಚಾಗುತ್ತಿವೆ. ಮಾನಸಿಕ ಅಸ್ವಸ್ಥತೆ, ಮಾದಕ ವಸ್ತುಗಳ ವ್ಯಸನ, ಆಪ್ತರ ಸಾವು, ಭೀಕರ ದುರಂತಗಳು, ನೈಸರ್ಗಿಕ ವಿಕೋಪಗಳು, ಅತಿಯಾದ ಸಾಲದ ಬಾಧೆ, ನಿರುದ್ಯೋಗ ಹಾಗೂ ದೀರ್ಘಕಾಲದ ಅನಾರೋಗ್ಯದಂತಹ ಸಮಸ್ಯೆಗಳು ಕೆಲವೊಮ್ಮೆ ಆತ್ಮಹತ್ಯೆಯಂತಹ ಗಂಭೀರ ನಿರ್ಧಾರಗಳಿಗೆ ಕಾರಣವಾಗುತ್ತಿವೆ ಎಂದರು.

ಆದ್ದರಿಂದ ಸಾರ್ವಜನಿಕರು 'ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು' ಎಂಬ ನಾಣ್ಣುಡಿಯಂತೆ ಮಾನಸಿಕ ಆರೋಗ್ಯಕ್ಕೂ ಆದ್ಯತೆ ನೀಡಬೇಕು. ಜೀವನದಲ್ಲಿ ಎದುರಾಗುವ ಸಮಸ್ಯೆಗಳನ್ನು ಸವಾಲುಗಳಾಗಿ ಸ್ವೀಕರಿಸಿ, ಅವುಗಳನ್ನು ಎದುರಿಸುವ ಕೌಶಲ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಇನ್ನೋರ್ವ ಅತಿಥಿ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಕೆ.ಎ. ಹಾದಿಮನಿ ಮಾತನಾಡಿ, ಜಗತ್ತಿನಲ್ಲಿ ಸಂಭವಿಸುವ ಆತ್ಮಹತ್ಯೆಯಂತಹ ಗಂಭೀರ ಸ್ವರೂಪದ ಸಾವುಗಳನ್ನು ತಡೆಗಟ್ಟುವ ಉದ್ದೇಶದಿಂದ ಪ್ರತಿವರ್ಷ ಸೆಪ್ಟೆಂಬರ್ 10ರಂದು ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ ಆಚರಿಸಲಾಗುತ್ತಿದೆ ಎಂದರು.

ಖಿನ್ನತೆ ಸೇರಿದಂತೆ ಗಂಭೀರ ಸಮಸ್ಯೆಗಳಿಗೆ ಸಿಲುಕಿದಾಗ ನೆರವಿನ ಹಸ್ತ ಚಾಚುವುದರ ಜೊತೆಗೆ ಆಪ್ತ ಸಮಾಲೋಚನೆ ಪಡೆಯಬೇಕು. ಮಾನಸಿಕ ರೋಗ ತಜ್ಞರ ಸಲಹೆ ಹಾಗೂ ಮನಶ್ಶಾಸ್ತ್ರಜ್ಞರೊಂದಿಗೆ ಆತ್ಮೀಯವಾಗಿ ಮಾತನಾಡುವುದು ಖಿನ್ನತೆಯಿಂದ ಹೊರಬರಲು ನೆರವಾಗುತ್ತದೆ. ಸೂಕ್ತ ಸಮಯದಲ್ಲಿ ನೆರವು ಪಡೆದುಕೊಂಡರೆ ಆತ್ಮಹತ್ಯೆಯಿಂದ ಪಾರಾಗಿ ಜೀವನವನ್ನು ಆಯ್ದುಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕರ್ನಾಟಕ ರಾಜ್ಯದ ಟೆಲಿ-ಮಾನಸ ಸಹಾಯವಾಣಿ 14416 ಗಂಭೀರ ಸ್ವರೂಪದ ಮಾನಸಿಕ ಅಸ್ವಸ್ಥತೆ ಅಥವಾ ಸಣ್ಣ ಪ್ರಮಾಣದ ಮಾನಸಿಕ ಸಮಸ್ಯೆ ಎದುರಿಸುತ್ತಿರುವವರಿಗೆ ಅಗತ್ಯ ನೆರವು ನೀಡಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಗುರು ವಿಜಯ ಮಹಾಂತೇಶ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಸಿ.ಬಿ. ಕಮ್ಮಾರ ಮಾತನಾಡಿ, ಬದುಕಿನ ಅಮೂಲ್ಯತೆಯನ್ನು ಅರಿತುಕೊಂಡು ಮೌಲ್ಯ ಹಾಗೂ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಆತ್ಮಹತ್ಯೆಯಂತಹ ಕೆಟ್ಟ ವಿಚಾರಗಳು ಮನಸ್ಸಿನಲ್ಲಿ ಸುಳಿಯುವುದಿಲ್ಲ ಎಂದರು.

ಮುಖ್ಯ ವೇದಿಕೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ, ಸೂಡಿಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ ಕುಬಸದ ಹಾಗೂ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹೇಮಾಕ್ಷಿ ತಳವಾರ ಉಪಸ್ಥಿತರಿದ್ದರು. ಕಾಲೇಜಿನ ಉಪನ್ಯಾಸಕ ಎನ್.ಎಸ್. ಜೋಶಿ ಕಾರ್ಯಕ್ರಮ ನಿರೂಪಿಸಿದರು.

> ಸಮಸ್ಯೆಗಳಿಂದ ಓಡಿಹೋಗುವುದಲ್ಲ; ಅವುಗಳನ್ನು ಸವಾಲಾಗಿ ಸ್ವೀಕರಿಸಿ ಎದುರಿಸುವುದೇ ಬದುಕಿನ ಗೆಲುವು. ಆತ್ಮಹತ್ಯೆಯಲ್ಲ, ಜೀವನವನ್ನೇ ಆಯ್ದುಕೊಳ್ಳಿ.
> - ಎಸ್.ಡಿ. ಬೆನ್ನೂರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ

---

## ದೇವಸ್ಥಾನದ ಪಾವಿತ್ರ್ಯ ಕಾಪಾಡುವುದು ಪ್ರತಿಯೊಬ್ಬ ಭಕ್ತನ ಕರ್ತವ್ಯ: ಮಲ್ಲಿಕಾರ್ಜುನ ಶಿವಾಚಾರ್ಯ

# ದೇವಾಲಯಗಳು ಸಂಸ್ಕೃತಿ-ಸಂಸ್ಕಾರದ ಶ್ರದ್ಧಾ ಕೇಂದ್ರಗಳು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದೇವಾಲಯಗಳು ಕೇವಲ ಪೂಜಾ ಸ್ಥಳಗಳಲ್ಲ, ಅವು ಆಧ್ಯಾತ್ಮಿಕ ನೆಮ್ಮದಿ ನೀಡುವುದರ ಜತೆಗೆ ಸಮಾಜದ ಸಂಸ್ಕೃತಿ, ಸಂಸ್ಕಾರ ಹಾಗೂ ಪರಂಪರೆಯನ್ನು ಉಳಿಸಿ ಬೆಳೆಸುವ ಶ್ರದ್ಧಾ ಕೇಂದ್ರಗಳಾಗಿವೆ. ಆದ್ದರಿಂದ ದೇವಾಲಯಗಳ ಪಾವಿತ್ರ್ಯ, ಸ್ವಚ್ಛತೆ ಹಾಗೂ ಶಿಸ್ತನ್ನು ಕಾಪಾಡುವುದು ಪ್ರತಿಯೊಬ್ಬ ಭಕ್ತನ ಕರ್ತವ್ಯ ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.



ಸಮೀಪದ ಮಜರೆ ಮಲ್ಲಾಪೂರ ಗ್ರಾಮದಲ್ಲಿ ಲಕ್ಷ್ಮೀ ದೇವಿ ದೇವಸ್ಥಾನದ ನೂತನ ಕಟ್ಟಡ ಉದ್ಘಾಟನೆ ಹಾಗೂ ಗದ್ದುಗೆಯ ಪ್ರಾಣ ಪ್ರತಿಷ್ಠಾಪನಾ ಸಮಾರಂಭದಲ್ಲಿ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಹಳೆಯ ದೇವಸ್ಥಾನವನ್ನು ಪುನರ್‌ನಿರ್ಮಿಸಿ ಸುಂದರ ದೇಗುಲ ನಿರ್ಮಿಸಿರುವ ಗ್ರಾಮಸ್ಥರ ಭಕ್ತಿ ಹಾಗೂ ಒಗ್ಗಟ್ಟನ್ನು ಶ್ಲಾಘಿಸಿದ ಅವರು, ಮಠ-ಮಂದಿರಗಳು ಮನುಷ್ಯ ಜೀವನದ ಶಾಶ್ವತ ಅಲಂಕಾರಗಳಾಗಿವೆ. ಭಕ್ತಿ, ಸಂಸ್ಕಾರ ಹಾಗೂ ಸತ್ಕಾರ್ಯಗಳು ಜೀವನಕ್ಕೆ ಶಾಶ್ವತ ಗೌರವ ತಂದುಕೊಡುತ್ತವೆ. ಡಿವಿಜಿಯವರ 'ದೇವ ಮಂದಿರ, ಭಜನೆ, ಪೂಜೆ, ಪ್ರಸಾದಗಳು ಜೀವನದ ಅಲಂಕಾರ' ಎಂಬ ಆಶಯದಂತೆ ದೇವಾಲಯಗಳು ಬದುಕಿಗೆ ಮೌಲ್ಯ ನೀಡುತ್ತವೆ ಎಂದರು.

ನಿಡಗುಂದಿಕೊಪ್ಪ ಶಾಖಾ ಶಿವ ಯೋಗದ ಅಭಿನವ ಚನ್ನಬಸವ ಸ್ವಾಮೀಜಿ ಮಾತನಾಡಿ, ದೇವಾಲಯಗಳು ನಮ್ಮ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಪ್ರತಿಬಿಂಬಿಸುವ ಶ್ರದ್ಧಾ ಕೇಂದ್ರಗಳಾಗಿವೆ. ಮಕ್ಕಳಲ್ಲಿ ಬಾಲ್ಯದಿಂದಲೇ ದೇವಾಲಯಗಳ ಮಹತ್ವದ ಅರಿವು ಮೂಡಿಸಿ ಸಮಾಜದ ಪ್ರಗತಿಗೆ ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಬಸನಗೌಡ ಮಲ್ಲನಗೌಡ್ರ, ರುದ್ರಗೌಡ ಮಲ್ಲನಗೌಡ್ರ, ವೀರಣ್ಣ ಶಿರಹಟ್ಟಿ, ಮಲ್ಲಿಕಾರ್ಜುನ ಭೂಮನಗೌಡ್ರ, ವೀರಯ್ಯ ತಿರಕನಗೌಡ್ರ, ಹಜರೆಸಾಬ ನದಾಫ್ ಸೇರಿದಂತೆ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

> ದೇವಾಲಯ ನಿರ್ಮಾಣದಷ್ಟೇ ಅದರ ಪಾವಿತ್ರ್ಯ, ಸ್ವಚ್ಛತೆ ಮತ್ತು ಶಿಸ್ತನ್ನು ಕಾಪಾಡುವುದೂ ಭಕ್ತರ ಜವಾಬ್ದಾರಿ. ಭಕ್ತಿ ಹಾಗೂ ಸತ್ಕಾರ್ಯಗಳು ಜೀವನಕ್ಕೆ ಶಾಶ್ವತ ಗೌರವ ತಂದುಕೊಡುತ್ತವೆ.
> - ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ

---

# ಮಹಿಳೆಯರ ಆರೋಗ್ಯ ರಕ್ಷಣೆಗೆ ಜಾಗೃತಿ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿ, ಆರೋಗ್ಯ ರಕ್ಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೆರೆಂಟಿಕ್ ರಿನಿವೆಬಲ್ ಸಂಸ್ಥೆಯ ರಾಜೇಂದ್ರ ಪ್ರಸಾದ ಹೇಳಿದರು.




ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ, ಸೆರೆಂಟಿಕ್ ರಿನಿವೆಬಲ್ ಸಂಸ್ಥೆ ಹಾಗೂ ಸಂಘಿನಿ ಪಿಂಕ್ ಪ್ಯಾಡ್ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಋತುಚಕ್ರ ಅರಿವು ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರಿಗೆ ಸ್ಯಾನಿಟರಿ ಪ್ಯಾಡ್ ವಿತರಿಸಿ ಅವರು ಮಾತನಾಡಿದರು.

ಋತುಚಕ್ರ ಮಹಿಳೆಯರಲ್ಲಿ ನಡೆಯುವ ಸಾಮಾನ್ಯ ನೈಸರ್ಗಿಕ ಪ್ರಕ್ರಿಯೆಯಾಗಿದೆ. ಹಿಂದಿನ ಕಾಲದಲ್ಲಿ ಈ ಕುರಿತು ಇದ್ದ ಸಾಮಾಜಿಕ ಕಟ್ಟುಪಾಡುಗಳಿಂದ ಮಹಿಳೆಯರಿಗೆ ಹಲವು ನಿರ್ಬಂಧಗಳಿದ್ದು, ಇದರಿಂದ ಅವರು ಆತ್ಮವಿಶ್ವಾಸ ಕಳೆದುಕೊಳ್ಳುವ ಪರಿಸ್ಥಿತಿ ಎದುರಾಗಿತ್ತು. ಆದರೆ ಇಂದು ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸುವ ಹಾಗೂ ಆರೋಗ್ಯದ ಹಿತದೃಷ್ಟಿಯಿಂದ ಗೌರವಯುತವಾಗಿ ನೋಡುವ ವಾತಾವರಣ ನಿರ್ಮಾಣವಾಗುತ್ತಿದೆ. ಹೀಗಾಗಿ ಮಕ್ಕಳಿಗೆ ಸೂಕ್ತ ಸಮಯದಲ್ಲಿ ಋತುಚಕ್ರದ ಕುರಿತು ವೈಜ್ಞಾನಿಕ ಅರಿವು ಮೂಡಿಸುವುದು ಅಗತ್ಯ ಎಂದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಸೆರೆಂಟಿಕ್ ಸಂಸ್ಥೆ ವಿದ್ಯುತ್ ಉತ್ಪಾದನೆಯ ಜತೆಗೆ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲೂ ಕಾರ್ಯನಿರ್ವಹಿಸುತ್ತಿರುವುದು ಶ್ಲಾಘನೀಯ. ಪರಿಸರ ಸ್ನೇಹಿ ವಿದ್ಯುತ್ ಉತ್ಪಾದನೆಯೊಂದಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಋತುಚಕ್ರ ಸಾಮಾನ್ಯ ಪ್ರಕ್ರಿಯೆಯಾಗಿದ್ದು, ಈ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಕಂಡುಬಂದರೂ ಭಯಪಡದೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಎ.ಡಿ. ಬಟ್ಟೂರ, ವಿಜಯ ನೀಲಗುಂದ, ಎಸ್.ಸಿ. ಚವಡಿ, ಸುಮಿತ್ರಾ ಹೊಂಬಳ, ರಾಜೇಂದ್ರ ಪ್ರಸಾದ, ಎ.ಎಂ. ಅಂಗಡಿ, ಭಾರತಿ ಗುಡ್ಲೂರ, ಅಕಿಲಾ ಅಡಗದ್ದಿ, ಸಿಖಂದರ ಕದಡಿ, ಕೊಪ್ಪಳ ಸೇರಿದಂತೆ ಹಲವರು ಇದ್ದರು.

---

## ಏಳು ಸಾಧಕರಿಗೆ 'ಜನನಿ ರತ್ನ' ರಾಜ್ಯ ಪ್ರಶಸ್ತಿ ಪ್ರದಾನ

# ಸಾಧಕರಿಗೆ ಗೌರವ, ಯುವಜನತೆಗೆ ಪ್ರೇರಣೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವುದು ಶ್ಲಾಘನೀಯ ಕಾರ್ಯವಾಗಿದ್ದು, ಇಂತಹ ಗೌರವಗಳು ಸಾಧಕರಿಗೆ ಮತ್ತಷ್ಟು ಉತ್ಸಾಹ ನೀಡುವುದರೊಂದಿಗೆ ಯುವಜನತೆ ಉತ್ತಮ ದಾರಿಯಲ್ಲಿ ಸಾಗಲು ಪ್ರೇರಣೆಯಾಗುತ್ತವೆ ಎಂದು ವಿಜಯನಗರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕುರಿ ಶಿವಮೂರ್ತಿ ಹೇಳಿದರು.

ಹಂಪಾಪಟ್ಟಣದ ಜೈ ಹನುಮ ಬಯಲು ರಂಗಮಂದಿರದ ದಾನ ಚಿಂತಾಮಣಿ ಸುಬ್ಬರೆಡ್ಡಿ ವೇದಿಕೆಯಲ್ಲಿ ಜನನಿ ಕಲಾ ಮತ್ತು ಸಾಂಸ್ಕೃತಿಕ ಸಂಘ ಹಾಗೂ ಜನನಿ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ 2026ನೇ ಸಾಲಿನ 'ಜನನಿ ರತ್ನ' ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜಕ್ಕೆ ಕೊಡುಗೆ ನೀಡುತ್ತಿರುವವರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ನಿರಂತರವಾಗಬೇಕು ಎಂದರು.

ರಾಜ್ಯದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಡಾ. ಪರಮೇಶ್ವರಯ್ಯ ಸೊಪ್ಪಿಮಠ ಮಾತನಾಡಿ, ಪ್ರಶಸ್ತಿ ಸಾಧನೆಯ ಅಂತ್ಯವಲ್ಲ; ಮುಂದಿನ ಜವಾಬ್ದಾರಿಯ ಆರಂಭ. ಪುರಸ್ಕೃತರು ತಮ್ಮ ಸೇವೆಯನ್ನು ಇನ್ನಷ್ಟು ವಿಸ್ತರಿಸಬೇಕು ಎಂದರು.

ವಿಜಯನಗರ ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷ ಬುಡ್ಡಿ ಬಸವರಾಜ್ ಮಾತನಾಡಿ, ಪರಿಶ್ರಮ, ಪ್ರತಿಭೆ ಹಾಗೂ ಸಾಧನೆಯ ಮೂಲಕ ಗಳಿಸುವ ಗೌರವಕ್ಕೆ ವಿಶೇಷ ಮೌಲ್ಯವಿದೆ. ಗ್ರಾಮೀಣ ಪ್ರತಿಭೆಗಳನ್ನು ಗುರುತಿಸುವ ಇಂತಹ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿವೆ ಎಂದರು.

ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸೊನ್ನದ ಗುರುಬಸವರಾಜ್, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಬಿ. ಕುಬೇರ ಹಾಗೂ ಮುಖಂಡ ಟಿ. ಮಹೇಂದ್ರ ಮಾತನಾಡಿದರು.

ಏಳು ಸಾಧಕರಿಗೆ 'ಜನನಿ ರತ್ನ'

ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸೇವೆ ಸಲ್ಲಿಸಿದ ಏಳು ಸಾಧಕರಿಗೆ 'ಜನನಿ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಯಳಂದೂರಿನ ಪಿ. ಮಂಜುನಾಥ್ ಅವರಿಗೆ 'ಜನನಿ ಜಾನಪದ ರತ್ನ', ಕಂಪ್ಲಿಯ ಡಾ. ಎಂ.ಎಸ್. ಸಾವಿತ್ರಮ್ಮ ಅವರಿಗೆ 'ಜನನಿ ಸಾಹಿತ್ಯ ರತ್ನ', ಹೊಸಪೇಟೆಯ ಪರಮಣ್ಣ ದೊರೆ ಅವರಿಗೆ 'ಜನನಿ ಸಹಕಾರ ರತ್ನ', ಹಗರಿಬೊಮ್ಮನಹಳ್ಳಿಯ ಡಾ. ಜ. ಚಿದಾನಂದ ಅವರಿಗೆ 'ಜನನಿ ಪಶುವೈದ್ಯ ರತ್ನ', ಹಂಪಾಪಟ್ಟಣದ ಕೆ. ಸೋಮನಾಥ್ ಅವರಿಗೆ 'ಜನನಿ ರಕ್ತದಾನಿ ರತ್ನ', ಗಾಳೆಮ್ಮನವರ ದುರುಗಮ್ಮ ಅವರಿಗೆ 'ಜನನಿ ಕೃಷಿ ರತ್ನ' ಹಾಗೂ ಸಂಡೂರಿನ ಎಸ್. ಮಂಜುಳಾ ಅವರಿಗೆ 'ಜನನಿ ಸಾರಿಗೆ ರತ್ನ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಜನನಿ ಸೇವಾ ಟ್ರಸ್ಟ್ ಅಧ್ಯಕ್ಷ ಎ. ಕೇಶವಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ರೈತ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭದ ಅಂಗವಾಗಿ ಎಸ್‌ಕೆಬಿ ಮೆಲೋಡೀಸ್ ತಂಡದಿಂದ 'ರಸಮಂಜರಿ' ಹಾಗೂ ಸಪ್ನಾ ಬಾವಿಕಟ್ಟಿ ಮತ್ತು ಸಾಕ್ಷಿ ಬಾವಿಕಟ್ಟಿ ಅವರಿಂದ ಭರತನಾಟ್ಯ ಪ್ರದರ್ಶನ ನಡೆಯಿತು. ಹನುಮಂತ ನಿರೂಪಿಸಿದರು. ಜಿ. ಸಂಗೀತಾ ಪ್ರಾರ್ಥಿಸಿದರು. ಅಂಬಳಿ ವಿರೇಂದ್ರ ವಂದಿಸಿದರು.

> ಸಾಧಕರನ್ನು ಗುರುತಿಸಿ ಗೌರವಿಸುವುದು ಅವರ ಸೇವೆಗೆ ನೀಡುವ ಮಾನ್ಯತೆ ಮಾತ್ರವಲ್ಲ; ಅವರ ಸಾಧನೆಯ ಹಾದಿ ಯುವಜನತೆಗೆ ಪ್ರೇರಣೆಯಾಗುವಂತೆ ಮಾಡುವ ಮಹತ್ವದ ಕಾರ್ಯವೂ ಹೌದು.
> - ಕುರಿ ಶಿವಮೂರ್ತಿ

---

# ಒಕ್ಕಲಿಗ ಸಮುದಾಯಕ್ಕೆ ಸಾಲ-ಸೌಲಭ್ಯ: ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿನಲ್ಲಿ ಒಕ್ಕಲಿಗ ಸಮುದಾಯದ ಅರ್ಹ ಫಲಾನುಭವಿಗಳಿಗೆ ವಿವಿಧ ಸಾಲ, ಸಹಾಯಧನ ಹಾಗೂ ಕೌಶಲ್ಯಾಭಿವೃದ್ಧಿ ಸೌಲಭ್ಯ ಒದಗಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ.30 ಕೊನೆಯ ದಿನವಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ-3ಎ ವ್ಯಾಪ್ತಿಯ ಒಕ್ಕಲಿಗ, ವಕ್ಕಲಿಗ, ಸರ್ಪಒಕ್ಕಲಿಗ, ಹಳ್ಳಿಕಾರ್ ಒಕ್ಕಲಿಗ, ನಾಮಧಾರಿ ಒಕ್ಕಲಿಗ, ಗಂಗಡ್ಕಾರ್ ಒಕ್ಕಲಿಗ, ದಾಸ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ, ಗೌಡ, ಕುಂಚಿಟಿಗ, ಕಾಪು, ಹೆಗ್ಗಡೆ, ಕಮ್ಮ, ರಡ್ಡಿ, ಗೌಂಡರ್, ನಾಮಧಾರಿಗೌಡ, ಉಪ್ಪಿನ ಕೊಳಗ/ಉತ್ತಮ ಕೊಳಗ ಸೇರಿದಂತೆ ನಿಗದಿತ ಸಮುದಾಯಗಳ ಅರ್ಹರು ಅರ್ಜಿ ಸಲ್ಲಿಸಬಹುದು.

### ಪ್ರಮುಖ ಯೋಜನೆಗಳು

**ಸ್ವಯಂ ಉದ್ಯೋಗ ನೇರಸಾಲ:** 18ರಿಂದ 55 ವರ್ಷದೊಳಗಿನ, ಗ್ರಾಮೀಣ ಪ್ರದೇಶದಲ್ಲಿ 98 ಸಾವಿರ ಹಾಗೂ ನಗರ ಪ್ರದೇಶದಲ್ಲಿ 1.20 ಲಕ್ಷದೊಳಗಿನ ವಾರ್ಷಿಕ ಕುಟುಂಬ ಆದಾಯ ಹೊಂದಿರುವವರಿಗೆ 2 ಲಕ್ಷದ ಘಟಕ ವೆಚ್ಚದಲ್ಲಿ ಶೇ.30ರಷ್ಟು, ಗರಿಷ್ಠ 30 ಸಾವಿರ ಸಹಾಯಧನ ಹಾಗೂ ಉಳಿದ ಮೊತ್ತವನ್ನು ಶೇ.4ರ ಬಡ್ಡಿದರದಲ್ಲಿ ಸಾಲವಾಗಿ ನೀಡಲಾಗುತ್ತದೆ.

**ಗಂಗಾ ಕಲ್ಯಾಣ ನೀರಾವರಿ:** ಅರ್ಹ ಸಣ್ಣ ಮತ್ತು ಅತಿ ಸಣ್ಣ ರೈತರ ಜಮೀನುಗಳಿಗೆ ಜಿಲ್ಲಾವಾರು ನಿಗದಿತ ಘಟಕ ವೆಚ್ಚದಲ್ಲಿ ಕೊಳವೆಬಾವಿ ಹಾಗೂ ಅಗತ್ಯವಿರುವ ಕಡೆ ತೆರೆದಬಾವಿ ನೀರಾವರಿ ಸೌಲಭ್ಯ ಒದಗಿಸಲಾಗುತ್ತದೆ.

**ಸ್ವಾವಲಂಬಿ ಸಾರಥಿ:** 21ರಿಂದ 45 ವರ್ಷದೊಳಗಿನ ಅರ್ಹ ಯುವಜನರಿಗೆ ನಾಲ್ಕುಚಕ್ರ ವಾಹನ ಖರೀದಿಗೆ ಪಡೆಯುವ ಸಾಲದ ಶೇ.50ರಷ್ಟು, ಗರಿಷ್ಠ 3 ಲಕ್ಷ ಸಹಾಯಧನ ನೀಡಲಾಗುತ್ತದೆ.

**ಬ್ಯಾಂಕ್ ಸಹಯೋಗದ ಸ್ವಯಂ ಉದ್ಯೋಗ ಸಾಲ:** ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಚಿಕ್ಕ ಬಳ್ಳಾಪುರ, ಮೈಸೂರು, ಮಂಡ್ಯ, ಹಾಸನ, ಕೊಡಗು ಹಾಗೂ ಕಲಬುರಗಿ ಜಿಲ್ಲೆಗಳ ಅರ್ಹರಿಗೆ ಬ್ಯಾಂಕ್ ಸಾಲದ ಮೇಲೆ ಶೇ.20ರಷ್ಟು, ಗರಿಷ್ಠ 1 ಲಕ್ಷ ಸಹಾಯಧನ ದೊರೆಯಲಿದೆ.

**ಶೈಕ್ಷಣಿಕ ಸಾಲ:** ಸಿಇಟಿ/ನೀಟ್ ಮೂಲಕ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಾರ್ಷಿಕ 1 ಲಕ್ಷದಂತೆ ಕೋರ್ಸ್ ಅವಧಿಗೆ ಗರಿಷ್ಠ 4ರಿಂದ 5 ಲಕ್ಷದವರೆಗೆ ಶೇ.2ರ ಬಡ್ಡಿದರದಲ್ಲಿ ಸಾಲ ನೀಡಲಾಗುತ್ತದೆ. ಈಗಾಗಲೇ ಸಾಲ ಪಡೆದ ವಿದ್ಯಾರ್ಥಿಗಳಿಗೆ ನಿಯಮಾನುಸಾರ ಮುಂದಿನ ಕಂತುಗಳ ನವೀಕರಣಕ್ಕೂ ಅವಕಾಶವಿದೆ.

**ವಿದೇಶಿ ಉನ್ನತ ವ್ಯಾಸಂಗ ಸಾಲ:** ವಿಶ್ವ ವಿಶ್ವವಿದ್ಯಾಲಯ ರ್‍ಯಾಂಕಿಂಗ್‌ನಲ್ಲಿ 1000ರೊಳಗಿನ ವಿಶ್ವವಿದ್ಯಾಲಯಗಳಲ್ಲಿ ಪೋಸ್ಟ್ ಡಾಕ್ಟೋರಲ್, ಪಿಎಚ್‌ಡಿ ಹಾಗೂ ಮಾಸ್ಟರ್ ಡಿಗ್ರಿ ವ್ಯಾಸಂಗಕ್ಕೆ ಪ್ರವೇಶ ಪಡೆದವರಿಗೆ ವಾರ್ಷಿಕ ಗರಿಷ್ಠ 25 ಲಕ್ಷದಂತೆ ಕೋರ್ಸ್ ಅವಧಿಗೆ ಗರಿಷ್ಠ 50 ಲಕ್ಷದವರೆಗೆ ಶೂನ್ಯ ಬಡ್ಡಿದರದಲ್ಲಿ ಸಾಲ ನೀಡಲಾಗುತ್ತದೆ.

### ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ:

ಅರ್ಹ ನಿರುದ್ಯೋಗಿ ಯುವಜನರಿಗೆ ಐಟಿಐ, ಜಿಟಿಟಿಸಿ, ಕೆಜಿಟಿಟಿಎಲ್, ಎಟಿಡಿಸಿ, ವಿಟಿಯು ಸೇರಿದಂತೆ ವಿವಿಧ ತರಬೇತಿ ಕೇಂದ್ರಗಳ ಮೂಲಕ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗಮುಖಿ ತರಬೇತಿ ನೀಡಲಾಗುತ್ತದೆ.

### ಸೆ.30ರೊಳಗೆ ಅರ್ಜಿ ಸಲ್ಲಿಸಿ

ಸಾಲ ಸೌಲಭ್ಯ ಪಡೆಯಲು ಬಯಸುವವರು ಸೇವಾಸಿಂಧು ಪೋರ್ಟಲ್‌ನ ಗ್ರಾಮ ಒನ್, ಬೆಂಗಳೂರು ಒನ್ ಅಥವಾ ಕರ್ನಾಟಕ ಒನ್ ಕೇಂದ್ರಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬೇಕು. ಅಮೃತ ಮುನ್ನಡೆ ಯೋಜನೆಗೆ "Kaushal Karnataka" (https://www.kaushalkar.com/) ಮೂಲಕ ಅರ್ಜಿ ಸಲ್ಲಿಸಬಹುದು.

ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯೋಜನೆಗಳಲ್ಲಿ ಯಾವುದಾದರೂ ಒಂದು ಯೋಜನೆಯ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಬಹುದು. 2024-25 ಮತ್ತು 2025-26ರಲ್ಲಿ ಅರ್ಜಿ ಸಲ್ಲಿಸಿ ಆಯ್ಕೆಯಾಗದ ಅರ್ಹ ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ; ಹಿಂದಿನ ಅರ್ಜಿಯನ್ನೇ ಆಯ್ಕೆ ಸಮಿತಿಯ ಮುಂದೆ ಮಂಡಿಸಲಾಗುವುದು.

ಅರ್ಹತೆ, ದಾಖಲಾತಿಗಳು ಹಾಗೂ ಯೋಜನೆಗಳ ಹೆಚ್ಚಿನ ಮಾಹಿತಿಗಾಗಿ "ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮ" (https://kvcdc.karnataka.gov.in/) ಅಥವಾ 080-29904350, 080-29904268 ಸಂಪರ್ಕಿಸಬಹುದು. ಆಯಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರ ಕಚೇರಿಯನ್ನೂ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ದೈಹಿಕ-ಮಾನಸಿಕ ಸದೃಢತೆಗೆ ಕ್ರೀಡಾಕೂಟ ಸಹಕಾರಿ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಕ್ರೀಡಾಕೂಟಗಳು ಸಹಕಾರಿಯಾಗಿದ್ದು, ಮಕ್ಕಳು ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ದೈಹಿಕ ಶಿಕ್ಷಕ ವಿ.ವಿ. ಕರಿಗಾರ ಹೇಳಿದರು.




ಪಟ್ಟಣದ ಪಿ.ಎಂ. ಶ್ರೀ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆ (ಡಿಪಿಇಪಿ) ಯಲ್ಲಿ ಕ್ರೀಡಾಕೂಟದಲ್ಲಿ ಸಾಧನೆ ಮಾಡಿದ ಮಕ್ಕಳಿಗೆ ಪ್ರಶಸ್ತಿ ಪತ್ರ ವಿತರಿಸಿ ಅವರು ಮಾತನಾಡಿದರು.

ಪ್ರಾಥಮಿಕ ಹಂತದಲ್ಲಿಯೇ ಮಕ್ಕಳು ಕ್ರೀಡಾ ಸೇರಿದಂತೆ ವಿವಿಧ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಸಾಧ್ಯ. ಕ್ರೀಡೆಯಲ್ಲಿ ಸೋಲು ಗೆಲುವಿಗಿಂತ ಭಾಗವಹಿಸುವಿಕೆ ಮುಖ್ಯವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು.

ಸಂಕ್ಷಿಪ್ತ ಸುದ್ದಿಗಳು

## ಹಿಂದ್ ಕೇಸರಿಯಿಂದ ಸೆ. 22ರಂದು ಕವನ ಸ್ಪರ್ಧೆ

ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಡಾ. ಸಿಂಪಿ ಲಿಂಗಣ್ಣ ರಸ್ತೆಯ ಹಿಂದ್ ಕೇಸರಿ ಯುವಕ ಮಂಡಳಿಯಿಂದ ಪ್ರಥಮ ಬಾರಿಗೆ ಕವನ ಸ್ಪರ್ಧೆ ಆಯೋಜಿಸಲಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದ ಕವಿಗಳಿಗೆ ಒಟ್ಟು 5 ಸಾವಿರ ನಗದು ಹಾಗೂ ಪುಸ್ತಕ ಬಹುಮಾನ ನೀಡಲಾಗುವುದು ಎಂದು ಮಂಡಳಿ ಅಧ್ಯಕ್ಷ ಬಸವರಾಜ ಕರುಗಲ್ ತಿಳಿಸಿದ್ದಾರೆ.



ಇದುವರೆಗೆ ಶ್ರೀ ಗಜಾನನ ಗೆಳೆಯರ ಬಳಗ ಎಂಬ ಹೆಸರಿನಿಂದ ಗುರುತಿಸಿಕೊಂಡಿದ್ದ ಬಳಗವು ಗಣೇಶೋತ್ಸವದ ಸಂದರ್ಭದಲ್ಲಿ ಕೊಪ್ಪಳದ ಕೋಟ್ಯಧಿಪತಿ ಕಾರ್ಯಕ್ರಮ ಆಯೋಜಿಸುವ ಮೂಲಕ ಗಮನ ಸೆಳೆದಿತ್ತು. ಈ ವರ್ಷದಿಂದ ಹಿಂದ್ ಕೇಸರಿ ಯುವಕ ಮಂಡಳಿ ಎಂಬ ಹೊಸ ಹೆಸರಿನೊಂದಿಗೆ ವಿನೂತನವಾಗಿ ಕವನ ಸ್ಪರ್ಧೆ ಆಯೋಜಿಸುತ್ತಿದೆ.

ಗಣೇಶೋತ್ಸವದ ಅಂಗವಾಗಿ ಸೆ.22ರಂದು ಸಂಜೆ 6 ಗಂಟೆಗೆ ನಗರದ ಡಾ. ಸಿಂಪಿ ಲಿಂಗಣ್ಣ ರಸ್ತೆಯಲ್ಲಿರುವ ಗಣೇಶ ಪ್ರತಿಷ್ಠಾಪನಾ ಸ್ಥಳದಲ್ಲಿ ಸ್ಪರ್ಧೆ ನಡೆಯಲಿದೆ. ಸ್ಪರ್ಧೆಗೆ ಯಾವುದೇ ವಯಸ್ಸಿನ ನಿರ್ಬಂಧವಿಲ್ಲ. ಆಸಕ್ತರು ಮುಕ್ತವಾಗಿ ಭಾಗವಹಿಸಬಹುದಾಗಿದ್ದು, ಸ್ವರಚಿತ ಕವನಗಳನ್ನು ಮಾತ್ರ ವಾಚಿಸಬೇಕು. ಸ್ಪರ್ಧೆಯ ವಿಜೇತರ ಆಯ್ಕೆಯಲ್ಲಿ ನಿರ್ಣಾಯಕರ ತೀರ್ಮಾನವೇ ಅಂತಿಮವಾಗಿರಲಿದೆ. ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಬಸವರಾಜ ಕರುಗಲ್ (9380605892), ಅಮಿತ್ ಮಾಲಗಿತ್ತಿ (9035556637) ಹಾಗೂ ಆನಂದ್ ವಿಭೂತಿಮಠ (7411850242) ಅವರನ್ನು ಸಂಪರ್ಕಿಸಬಹುದು.

## ಅಪರಿಚಿತ ವ್ಯಕ್ತಿ ಸಾವು: ವಾರಸುದಾರರ ಪತ್ತೆಗೆ ಮನವಿ

ವಿಜಯಸಾಕ್ಷಿ ಸುದ್ದಿ, ಗದಗ

ಮುನಿರಾಬಾದ್ ರೈಲ್ವೆ ನಿಲ್ದಾಣದಲ್ಲಿ ಸೆ. 7ರಂದು ಚಲಿಸುತ್ತಿದ್ದ ರೈಲುಗಾಡಿಗೆ ಸಿಲುಕಿ ಮೃತಪಟ್ಟಿರುವ ಅಪರಿಚಿತ ವ್ಯಕ್ತಿಯ ವಾರಸುದಾರರ ಪತ್ತೆಗೆ ಗದಗ ರೈಲ್ವೆ ಪೊಲೀಸರು ಮನವಿ ಮಾಡಿದ್ದಾರೆ.



ಮೃತ ವ್ಯಕ್ತಿಗೆ ಸುಮಾರು 60-65 ವರ್ಷ ವಯಸ್ಸಾಗಿದ್ದು, ದುಂಡು ಮುಖ, ಅಗಲವಾದ ಹಣೆ, ಉದ್ದನೆಯ ಮೂಗು, ಎಣ್ಣೆಗೆಂಪು ಮೈಬಣ್ಣ ಹಾಗೂ ಸಾಧಾರಣ ಮೈಕಟ್ಟು ಹೊಂದಿದ್ದಾರೆ. ಸುಮಾರು 5.4 ಅಡಿ ಎತ್ತರವಿದ್ದು, ತಲೆಯಲ್ಲಿ 2-3 ಇಂಚು ಬಿಳಿ ಕೂದಲು, ಸುಮಾರು ಅರ್ಧ ಇಂಚು ಬಿಳಿ ದಾಡಿ ಹಾಗೂ ಮೀಸೆ ಇದೆ.

ಮೃತ ವ್ಯಕ್ತಿ ಕಾಫಿ ಬಣ್ಣದ ಟಿ-ಶರ್ಟ್, ತಿಳಿ ಹಳದಿ ಬಣ್ಣದ ಬನಿಯನ್, ಬಿಳಿ ಲುಂಗಿ ಹಾಗೂ ಹಳದಿ ಬಣ್ಣದ ಕಪ್ಪು ಗೆರೆಗಳ ಚೆಕ್ಸ್ ಇರುವ ಬರ್ಮುಡಾ ಧರಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಗದಗ ರೈಲ್ವೆ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್. ನಂ. 40/2026, ಕಲಂ 194 ಬಿ.ಎನ್.ಎಸ್.ಎಸ್. ಅಡಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಮೃತ ವ್ಯಕ್ತಿಯ ಕುರಿತು ಮಾಹಿತಿ ಅಥವಾ ವಾರಸುದಾರರ ಬಗ್ಗೆ ಸುಳಿವು ದೊರೆತಲ್ಲಿ ಗದಗ ರೈಲ್ವೆ ಪೊಲೀಸ್ ಠಾಣೆ: 08372-278744, ಮೊ.: 9480802128 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080-22871291 ಸಂಪರ್ಕಿಸುವಂತೆ ಪೊಲೀಸರು ಕೋರಿದ್ದಾರೆ.

### ಅರ್ಥಪೂರ್ಣ ಸಾಹಿತ್ಯಕ್ಕೆ ಆದ್ಯತೆ ನೀಡಲು ಶ್ರೀ ಚನ್ನವೀರ ಮಹಾಸ್ವಾಮಿಗಳ ಕರೆ

# ಭಜನೆಗೆ ಭಕ್ತಿ-ಸಂಸ್ಕಾರದ ಸ್ಪರ್ಶವಿರಲಿ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಜನೆ ಹಾಗೂ ಜಾನಪದ ಗೀತೆಗಳು ಕೇವಲ ಮನರಂಜನೆಗೆ ಸೀಮಿತವಾಗದೆ, ಸಮಾಜದಲ್ಲಿ ಉತ್ತಮ ಸಂಸ್ಕಾರ, ಭಕ್ತಿ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವಂತಿರಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.



ಪಟ್ಟಣದ ಸೊಪ್ಪಿನಕೇರಿ ಓಣಿಯ ಶ್ರೀ ಸೋಮೇಶ್ವರ ತೇರಿನ ಮನೆ ಆವರಣದಲ್ಲಿ ಸೋಮವಾರ ಶ್ರಾವಣ ಮಾಸದ ಪ್ರಯುಕ್ತ ಶ್ರೀ ಜಂತ್ಲಿ ಬಸವೇಶ್ವರ ಭಜನಾ ಸಂಘದ ವತಿಯಿಂದ ಆಯೋಜಿಸಿದ್ದ ಭಾರಿ ಸವಾಲ್ ಭಜನಾ ಸ್ಪರ್ಧೆಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಭಜನೆ ನಮ್ಮ ನಾಡಿನ ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯ ಅವಿಭಾಜ್ಯ ಅಂಗವಾಗಿದೆ. ಹಿರಿಯರ ಕಾಲದಿಂದ ಬೆಳೆಸಿಕೊಂಡು ಬಂದಿರುವ ಭಜನಾ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಇಂದಿನ ಯುವ ಸಮಾಜದ ಮೇಲಿದೆ. ಭಜನೆಯ ಮೂಲಕ ದೇವರ ಸ್ಮರಣೆ, ಸದಾಚಾರ, ಮಾನವೀಯತೆ ಹಾಗೂ ಪರಸ್ಪರ ಸೌಹಾರ್ದದ ಸಂದೇಶವನ್ನು ಜನರಿಗೆ ತಲುಪಿಸಬೇಕು ಎಂದರು.

ಭಜನೆಗಳು ಆಧ್ಯಾತ್ಮಿಕ ಚಿಂತನೆ ಹಾಗೂ ಉತ್ತಮ ಜೀವನ ಮೌಲ್ಯಗಳನ್ನು ಸಾರುತ್ತವೆ.

ಆದ್ದರಿಂದ ಅವುಗಳನ್ನು ಕೇವಲ ಮನರಂಜನೆಯ ದೃಷ್ಟಿಯಿಂದ ನೋಡದೆ, ಸಮಾಜವನ್ನು ಸನ್ಮಾರ್ಗದತ್ತ ಸಾಗಿಸಲು ಪ್ರೇರಣೆಯಾಗುವ ರೀತಿಯಲ್ಲಿ ಪ್ರಸ್ತುತಪಡಿಸಬೇಕು. ಯುವಕರು ಇಂತಹ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ನಮ್ಮ ನೆಲದ ಪರಂಪರೆಯನ್ನು ಉಳಿಸಿ ಬೆಳೆಸಬೇಕು. ಈ ನಿಟ್ಟಿನಲ್ಲಿ ಸೊಪ್ಪಿನಕೇರಿ ಓಣಿಯ ಯುವಕರು ಮುಂದಾಗಿರುವುದು ಶ್ಲಾಘನೀಯ ಎಂದು ಹೇಳಿದರು.

ಬಿಜೆಪಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಹಾಗೂ ತಾಪಂ ಮಾಜಿ ಸದಸ್ಯ ಚನ್ನಪ್ಪ ಜಗಲಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಭಜನೆ ಹಾಗೂ ಜಾನಪದ ಹಾಡುಗಳು ಅಸಂಬದ್ಧ ಮತ್ತು ಅಶ್ಲೀಲ ಸಾಹಿತ್ಯದೊಂದಿಗೆ ವಿಜೃಂಭಿಸುತ್ತಿರುವುದು ಉತ್ತಮ ಬೆಳವಣಿಗೆಯಲ್ಲ. ಜನಮನದ ಮೇಲೆ ಪ್ರಭಾವ ಬೀರುವ ಭಜನೆ ಹಾಗೂ ಜಾನಪದ ಗೀತೆಗಳಲ್ಲಿ ಅರ್ಥಪೂರ್ಣ ಮತ್ತು ಸಮಾಜಮುಖಿ ಸಾಹಿತ್ಯಕ್ಕೆ ಆದ್ಯತೆ ನೀಡಬೇಕು ಎಂದು ಹೇಳಿದರು.

> ಭಜನೆ ಹಾಗೂ ಜಾನಪದ ಗೀತೆಗಳು ಕೇವಲ ಮನರಂಜನೆಗೆ ಸೀಮಿತವಾಗದೆ, ಸಮಾಜಕ್ಕೆ ಉತ್ತಮ ಸಂಸ್ಕಾರ, ಭಕ್ತಿ, ಮಾನವೀಯತೆ ಹಾಗೂ ನೈತಿಕ ಮೌಲ್ಯಗಳ ಸಂದೇಶ ಸಾರಬೇಕು. ಯುವಕರು ನಮ್ಮ ನೆಲದ ಭಜನಾ ಪರಂಪರೆಯನ್ನು ಉಳಿಸಿ ಬೆಳೆಸುವ ಹೊಣೆಗಾರಿಕೆ ವಹಿಸಬೇಕು.
> - ಶ್ರೀ ಚನ್ನವೀರ ಮಹಾಸ್ವಾಮಿಗಳು, ಹೂವಿನಶಿಗ್ಲಿ ಮಠಹಿ

ಶ್ರಾವಣ ಮಾಸದ ಅಂಗವಾಗಿ ನಡೆದ ಸವಾಲ್ ಭಜನಾ ಸ್ಪರ್ಧೆಯಲ್ಲಿ ಧಾರವಾಡ ತಾಲೂಕಿನ ಮಿಶ್ರಿಕೋಟೆಯ ಶ್ರೀ ಕರಿಯಮ್ಮ ದೇವಿ ಭಜನಾ ಸಂಘ, ಹೊಸಯಲ್ಲಾಪುರದ ಶ್ರೀ ಮಾರುತಿ ವಾಲ್ಮೀಕಿ ಭಜನಾ ಸಂಘ ಸೇರಿದಂತೆ ವಿವಿಧ ಭಜನಾ ತಂಡಗಳು ಭಾಗವಹಿಸಿ ಭಕ್ತಿಗೀತೆಗಳನ್ನು ಪ್ರಸ್ತುತಪಡಿಸಿದವು. ತಂಡಗಳ ಗಾಯನಕ್ಕೆ ನೆರೆದಿದ್ದ ಭಕ್ತರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಬಸವೇಶ ಮಹಾಂತಶೆಟ್ಟರ, ಚಂಬಣ್ಣ ಬಾಳಿಕಾಯಿ, ಚನ್ನಪ್ಪ ಜಗಲಿ, ವಿಜಯಕುಮಾರ ಹತ್ತಿಕಾಳ, ಗುರುರಾಜ ಪಾಟೀಲಕುಲಕರ್ಣಿ, ಭರಮಪ್ಪ ಕೊಡ್ಲಿ, ಚಂದ್ರಪ್ಪ ಮೆಕ್ಕಿ, ಬಂಗಾರಪ್ಪ ಮುಳಗುಂದ, ಚನ್ನಪ್ಪ ಚಿಂಚಲಿ, ಈರಪ್ಪ ಗುಡಗೇರಿ, ಈರಣ್ಣ ಮುಳಗುಂದ, ಬಸವರಾಜ ಮೆಣಸಿನಕಾಯಿ, ಶಿವಯೋಗಿ ಅಂಕಲಕೋಟಿ, ಬಸವರಾಜ ಉಮಚಗಿ, ಸುನೀಲ ಮುಳಗುಂದ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ಶಿಕ್ಷಕರಾದ ಮಂಜುನಾಥ ಚಾಕಲಬ್ಬಿ ಹಾಗೂ ಜಯಪ್ರಕಾಶ ಹೊಟ್ಟಿ ನಿರೂಪಿಸಿದರು.

## ನಾಳೆ ಸಹಕಾರ ಕ್ಷೇತ್ರದ ವಂಚನೆ, ಎಐ ಬಳಕೆ ಕುರಿತು ತರಬೇತಿ

ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಮರ್ಚಂಟ್ಸ್ ಲಿಬರಲ್‌ಕೋ-ಆಪ್ ಬ್ಯಾಂಕ್ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಅರ್ಬನ್ ಬ್ಯಾಂಕ್‌ಗಳು ಹಾಗೂ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ವ್ಯವಸ್ಥಾಪಕರು ಮತ್ತು ಮುಖ್ಯ ಕಾರ್ಯನಿರ್ವಾಹಕರಿಗಾಗಿ ಸೆ. 12ರಂದು ಬೆಳಿಗ್ಗೆ 10 ಗಂಟೆಗೆ ಗದಗದ ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕ್ ಸಭಾಭವನದಲ್ಲಿ ಒಂದು ದಿನದ ವಿಶೇಷ ತರಬೇತಿ ಶಿಬಿರ ನಡೆಯಲಿದೆ.

ಗದಗ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಸಿ.ಎಂ. ಪಾಟೀಲ ಅಧ್ಯಕ್ಷತೆ ವಹಿಸುವರು. ಮರ್ಚಂಟ್ಸ್ ಲಿಬರಲ್ ಕೋ-ಆಪ್ ಬ್ಯಾಂಕ್ ಅಧ್ಯಕ್ಷ ಮೋಹನ್ ಟಿ. ಕೋಟಿ ಉದ್ಘಾಟಿಸುವರು. ಉಪಾಧ್ಯಕ್ಷ ವಾಯ್.ಎಫ್. ಪಾಟೀಲ, ಕೆಸಿಸಿ ಬ್ಯಾಂಕ್ ನಿರ್ದೇಶಕರಾದ ಎಂ.ಎಫ್. ಕಲಗುಡಿ, ಸಿ.ಬಿ. ದೊಡ್ಡಗೌಡ್ರ ಸೇರಿದಂತೆ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಾರ್ಯಾಗಾರದಲ್ಲಿ ಬ್ಯಾಂಕಿಂಗ್ ಹಾಗೂ ಪತ್ತಿನ ವ್ಯವಹಾರಗಳಲ್ಲಿನ ವಂಚನೆ, ಗುರುತಿಸುವಿಕೆ, ಜಾಗೃತಿ ಮತ್ತು ಸುರಕ್ಷತಾ ಕ್ರಮಗಳ ಕುರಿತು ಚಾರ್ಟರ್ಡ್ ಅಕೌಂಟೆಂಟ್ ಬಿ.ವಿ. ರವೀಂದ್ರನಾಥ ಹಾಗೂ ಬ್ಯಾಂಕಿಂಗ್-ಪತ್ತಿನ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ (JL) ತಂತ್ರಜ್ಞಾನದ ಬಳಕೆ,

ಅನುಕೂಲ-ಅನಾನುಕೂಲಗಳ ಕುರಿತು ಚಾರ್ಟರ್ಡ್ ಅಕೌಂಟೆಂಟ್ ವರುಣ್ ಭಟ್ ಉಪನ್ಯಾಸ ನೀಡುವರು.

ತರಬೇತಿ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಗದಗ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಕೋರಿದ್ದಾರೆ.

## ಜಕ್ಕಲಿಯಲ್ಲಿ ವೈಭವದ ವೀರಭದ್ರೇಶ್ವರ ಉಚ್ಚಾಯ

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದಲ್ಲಿ ಶ್ರಾವಣ ಮಾಸದ ಕೊನೆಯ ಸೋಮವಾರದ ಅಂಗವಾಗಿ ಶ್ರೀ ವೀರಭದ್ರೇಶ್ವರ ದೇವರ ಉಚ್ಚಾಯ ತೇರು ನೂರಾರು ಭಕ್ತರ ಸಮ್ಮುಖದಲ್ಲಿ ಸಡಗರ, ಸಂಭ್ರಮ ಹಾಗೂ ಭಕ್ತಿಭಾವದಿಂದ ಜರುಗಿತು.



ಜಾತ್ರಾ ಮಹೋತ್ಸವದ ಅಂಗವಾಗಿ ಬೆಳಗಿನ ಜಾವದಿಂದಲೇ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜಾ ಕೈಂಕರ್ಯ, ಮಹಾರುದ್ರಾ ಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಮಧ್ಯಾಹ್ನ 2ರಿಂದ ಸಂಜೆ 5ರವರೆಗೆ ದೇವಸ್ಥಾನದ ಆವರಣದಲ್ಲಿ ಅನ್ನದಾಸೋಹ ನಡೆಯಿತು.

ಗ್ರಾಮದ ಮಹಿಳೆಯರು ಮುಂಜಾನೆಯಿಂದಲೇ ದೇವಸ್ಥಾನಕ್ಕೆ ತೆರಳಿ ವೀರಭದ್ರೇಶ್ವರನ ದರ್ಶನ ಪಡೆದು, ಕಾಯಿ ಒಡೆಸಿ, ನೈವೇದ್ಯ ಸಮರ್ಪಿಸಿ ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.

ಸಂಜೆ ಶ್ರೀ ಕಲ್ಮೇಶ್ವರ ದೇವಸ್ಥಾನದಿಂದ ನಂದಿಕೋಲನ್ನು ಮೆರವಣಿಗೆಯಲ್ಲಿ ತರಲಾಯಿತು. ಬಳಿಕ ಗ್ರಾಮದ ಶಿವಶರಣರಾದ ಅಣ್ಣಯ್ಯತಮ್ಮಯ್ಯನವರ ಮನೆಯಿಂದ ಕಳಸವನ್ನು ತಂದು ವಿಶೇಷ ಪೂಜೆ ಸಲ್ಲಿಸಿ ತೇರಿಗೆ ಜೋಡಿಸಲಾಯಿತು. ಸಂಜೆ 6ಕ್ಕೆ ಪೂಜೆ ನೆರವೇರಿಸಿದ ಬಳಿಕ ತೇರು ಎಳೆಯಲು ಚಾಲನೆ ನೀಡಲಾಯಿತು. ಈ ವೇಳೆ ಬಣ್ಣಬಣ್ಣದ ಪಟಾಕಿಗಳು ಆಕಾಶದಲ್ಲಿ ಚಿತ್ತಾರ ಮೂಡಿಸಿದವು.

ದೇವಸ್ಥಾನದಿಂದ ಹೊರಟ ತೇರು ಗ್ರಾಮದ ಅಗಸಿ ಬಾಗಿಲಿನ ಭೋರ್ಗಲ್‌ವರೆಗೆ ಸಾಗಿತು. ಬಳಿಕ ಅಲ್ಲಿಂದ ಹಿಂದಿರುಗಿ ಗಾಂಧಿ ಸರ್ಕಲ್, ಹನುಮಂತ ದೇವರ ಗುಡಿ ಹಾಗೂ ಸಂಗಮೇಶ್ವರ ಗುಡಿ ಮೂಲಕ ಶ್ರೀ ಕಲ್ಮೇಶ್ವರ ದೇವಸ್ಥಾನಕ್ಕೆ ತೆರಳಿತು. ಅಲ್ಲಿ ಪೂಜೆ ಸಲ್ಲಿಸಿದ ಬಳಿಕ ಮರಳಿ ಸ್ವಸ್ಥಳಕ್ಕೆ ತೇರು ಆಗಮಿಸಿದಾಗ ಭಕ್ತರು ಚಪ್ಪಾಳೆ ತಟ್ಟಿ ಸಂಭ್ರಮಿಸಿದರು.

ಉತ್ಸವದ ಪ್ರಮುಖ ಆಕರ್ಷಣೆಯಾಗಿದ್ದ ನರೇಗಲ್ಲ, ಕೋಡಿಕೊಪ್ಪದ ಪುರುವಂತರ ಸೇವೆ ಭಕ್ತರನ್ನು ರೋಮಾಂಚನಗೊಳಿಸಿತು. 'ಆಹಾ.. ಹಾ.. ವೀರಾ.. ಆಹಾ.. ಹಾ.. ರುದ್ರಾ.. ಕಡೆ ಕಡೆ' ಎಂಬ ಘೋಷದೊಂದಿಗೆ ಹೆಜ್ಜೆ ಹಾಕಿದ ಪುರುವಂತರು ಅವತಾರ ಪುರುಷ ಶ್ರೀ ವೀರಭದ್ರೇಶ್ವರನ ಚರಿತ್ರೆ ಹಾಗೂ ಪವಾಡಗಳನ್ನು ಒಡಪುಗಳ ಮೂಲಕ ಸಾರಿದರು. ರುದ್ರಾವೇಶದ ಭಕ್ತಿಯ ಪರಾಕಾಷ್ಠೆ ಪ್ರದರ್ಶಿಸಿದ ಈ ಸೇವೆ ನೋಡುಗರ ಗಮನ ಸೆಳೆಯಿತು. ಈ ವೇಳೆ ಕೆಲ ಭಕ್ತರು ದೇಹದ ವಿವಿಧ ಭಾಗಗಳಿಗೆ ಶಸ್ತ್ರ ಚುಚ್ಚಿಕೊಂಡು ವಿಶಿಷ್ಟ ಭಕ್ತಿಯ ಆಚರಣೆ ಮೆರೆದರು.

ವಿವಿಧ ಬಗೆಯ ಹೂವುಗಳಿಂದ ಅಲಂಕೃತಗೊಂಡಿದ್ದ ತೇರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗುತ್ತಿದ್ದಂತೆ ಭಕ್ತರು ದಾರಿಯುದ್ದಕ್ಕೂ 'ವೀರಭದ್ರೇಶ್ವರ ಮಹಾರಾಜ ಕೀ ಜೈ', 'ಹರ ಹರ ಮಹಾದೇವ' ಎಂದು ಜಯಘೋಷ ಮೊಳಗಿಸಿದರು. ಉತ್ತತ್ತಿ ಎಸೆದು, ತೇರಿಗೆ ನಮಿಸಿ ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ಪ್ರಾರ್ಥಿಸಿದರು.

ಗ್ರಾಮದ ದುರ್ಗಾದೇವಿ ಹಾಗೂ ಬೀರದೇವರ ಡೊಳ್ಳಿನ ಮೇಳದವರ ಡೊಳ್ಳು ಕುಣಿತ ಉತ್ಸವಕ್ಕೆ ಮತ್ತಷ್ಟು ಮೆರಗು ನೀಡಿತು. ಯುವಕರ ತಂಡವೊಂದು ನಂದಿಕೋಲನ್ನು ಒಂದೇ ಕೈಯಲ್ಲಿ ಎತ್ತಿ ಹಿಡಿದು ಪ್ರದರ್ಶಿಸಿದ್ದು ಗಮನ ಸೆಳೆಯಿತು. ತೋಟಗಂಟಿಯ ಮಾರುತಿ ಕರಡಿ ಮಜಲು ಮೇಳದವರು ಪುರುವಂತರಿಗೆ ಸಾಥ್ ನೀಡಿದರು.

ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನಕ್ಕೆ ತಳಿರು-ತೋರಣಗಳನ್ನು ಕಟ್ಟಲಾಗಿತ್ತು. ದೇವಸ್ಥಾನ ಹಾಗೂ ಗೋಪುರಕ್ಕೆ ಮಾಡಲಾಗಿದ್ದ ವಿದ್ಯುತ್ ದೀಪಗಳ ಅಲಂಕಾರ ರಾತ್ರಿ ವೇಳೆ ಝಗಮಗಿಸಿ ಭಕ್ತರ ಕಣ್ಮನ ಸೆಳೆಯಿತು. ಗ್ರಾಮದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

### ಜಿಲ್ಲೆಯಲ್ಲಿ ಸಾಕ್ಷರತಾ ಚಳವಳಿ ಯಶಸ್ವಿಗೊಳಿಸಲು ಮುಕುಲ್ ಜೈನ ಕರೆ

# ಅಕ್ಷರ ಜ್ಞಾನದಿಂದ ಬದುಕಿನ ಪರಿವರ್ತನೆ

ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷರವೆಂಬುದು ಕೇವಲ ಜ್ಞಾನವಲ್ಲ, ಅದು ಬದುಕನ್ನು ಬದಲಿಸುವ ಶಕ್ತಿ. ಒಬ್ಬ ವ್ಯಕ್ತಿಗೆ ಅಕ್ಷರ ಕಲಿಸಿದರೆ ಒಂದು ಕುಟುಂಬಕ್ಕೆ ಬೆಳಕು ನೀಡಿದಂತೆ, ಒಂದು ಸಮಾಜವನ್ನು ಸಾಕ್ಷರಗೊಳಿಸಿದರೆ ಇಡೀ ರಾಷ್ಟ್ರಕ್ಕೆ ಬೆಳಕು ನೀಡಿದಂತೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ ಜೈನ್ ಹೇಳಿದರು.



ಜಿಲ್ಲಾಡಳಿತ ಕಚೇರಿ ಆವರಣದಲ್ಲಿ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆ ವತಿಯಿಂದ 60ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಕಾರ್ಯಕ್ರಮದಲ್ಲಿ ಸಾಕ್ಷರತಾ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸಾಕ್ಷರತೆಯು ವ್ಯಕ್ತಿಯ ವೈಯಕ್ತಿಕ ಹಾಗೂ ಆರ್ಥಿಕ ಅಭಿವೃದ್ಧಿಯ ಜತೆಗೆ ಸಾಮಾಜಿಕ ಜಾಗೃತಿ, ಪ್ರಜಾಪ್ರಭುತ್ವದ ಬಲವರ್ಧನೆ ಮತ್ತು ಮಹಿಳಾ ಸಬಲೀಕರಣಕ್ಕೆ ಸಹಕಾರಿಯಾಗುತ್ತದೆ. ಜಿಲ್ಲೆಯನ್ನು ಸಂಪೂರ್ಣ ಸಾಕ್ಷರಗೊಳಿಸಲು ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಬೇಕು ಎಂದು ಕರೆ ನೀಡಿದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಎಸ್.ಎಸ್. ಕುರಿಯವರ ಅವರು ಗಣ್ಯರನ್ನು ಸ್ವಾಗತಿಸಿ, ದೇಶ, ರಾಜ್ಯ ಹಾಗೂ ಜಿಲ್ಲೆಯ ಸಾಕ್ಷರತೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ದೇಶದ ನಿಜವಾದ ಅಭಿವೃದ್ಧಿಯನ್ನು ಅಳೆಯಲು ಆರ್ಥಿಕ ಪ್ರಗತಿಯ ಜತೆಗೆ ಜನರ ಶಿಕ್ಷಣ ಮತ್ತು ಸಾಕ್ಷರತೆಯ ಮಟ್ಟವೂ ಪ್ರಮುಖ ಮಾನದಂಡವಾಗಿದೆ. ಸಾಕ್ಷರತೆ ಹೆಚ್ಚಾದಂತೆ ದೇಶದ ಅಭಿವೃದ್ಧಿಯೂ ವೇಗ ಪಡೆಯುತ್ತದೆ ಎಂದರು.

ಸಾಕ್ಷರ ವ್ಯಕ್ತಿ ಉತ್ತಮ ಉದ್ಯೋಗ ಪಡೆಯಲು ಪ್ರಯತ್ನಿಸುವುದರ ಜತೆಗೆ ಆರೋಗ್ಯದ ಬಗ್ಗೆ ಜಾಗೃತನಾಗುತ್ತಾನೆ, ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಾನೆ ಹಾಗೂ ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳುತ್ತಾನೆ. ಹೀಗಾಗಿ ಸಾಕ್ಷರತೆ ದೇಶದ ಮಾನವ ಸಂಪನ್ಮೂಲವನ್ನು ಬಲಪಡಿಸುತ್ತದೆ. ಜ್ಞಾನ ಹೊಂದಿರುವ ನಾಗರಿಕರೇ ದೇಶದ ದೊಡ್ಡ ಸಂಪತ್ತು. ಸಾಕ್ಷರತೆ ಕೇವಲ ಸರ್ಕಾರಿ ಯೋಜನೆಯಲ್ಲ, ಸಾಮಾಜಿಕ ಚಳವಳಿಯಾಗಿದೆ ಎಂದು ಹೇಳಿದರು.

ಕನಿಷ್ಠ ಒಬ್ಬ ಅನಕ್ಷರಸ್ಥ ವ್ಯಕ್ತಿಗೆ ಓದಲು ಮತ್ತು ಬರೆಯಲು ಕಲಿಸುವ ಸಂಕಲ್ಪ ಮಾಡಬೇಕು. ಶಿಕ್ಷಣ ಇಲಾಖೆಯ ಅಧಿಕಾರಿಗಳು ತಮ್ಮ ಸಹಯೋಗದೊಂದಿಗೆ ಸಾಕ್ಷರತಾ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕು ಎಂದು ಅವರು ಕರೆ ನೀಡಿದರು.

ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಸಾಕ್ಷರತಾ ಪ್ರಮಾಣ ವಚನ ಬೋಧಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯ ಕೆ.ಡಿ. ಬಡಿಗೇರ, ಗದಗ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ. ಬಾವಿಕಟ್ಟಿ, ಎಸ್.ಆರ್. ನದಾಫ್, ಎಸ್.ಬಿ. ಬನ್ನಿಕಲ್, ಕೆ.ಎ. ಹುಲಗೇರಿ, ಜಿ.ಡಿ. ದಾಸರ, ಎಸ್.ವೈ. ವಿಬೂತಿ ಸೇರಿದಂತೆ ಗದಗ ಗ್ರಾಮೀಣ ವಿಭಾಗದ ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳು, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳು ಹಾಗೂ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿ ಭಾಗವಹಿಸಿದ್ದರು.

ಶಾಸ್ತ್ರಿಜಿ ಬಿ.ಎಡ್. ಕಾಲೇಜಿನ ಉಪನ್ಯಾಸಕ ರಾಜು ಕೇರೂರ ಹಾಗೂ ಪ್ರಶಿಕ್ಷಣಾರ್ಥಿಗಳು, ಯುವ ಸಬಲೀಕರಣ ಇಲಾಖೆಯ ವಿದ್ಯಾರ್ಥಿಗಳು ಮತ್ತು ಸಾಕ್ಷರತಾ ಕಾರ್ಯಕ್ರಮಗಳ ಬೋಧಕರು ಧ್ವಜಾರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮೆರಗು ತಂದರು.

ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯಿಂದ ಸಾಕ್ಷರತಾ ಕಾರ್ಯಕ್ರಮಕ್ಕೆ ಸಂಬಂಧಿಸಿದ ಬಿತ್ತಿಪತ್ರಗಳನ್ನು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರು ಹಾಗೂ ಇತರರು ಅನಾವರಣಗೊಳಿಸಿದರು.


> ಸಾಕ್ಷರತೆ ಕೇವಲ ಸರ್ಕಾರಿ ಯೋಜನೆಯಲ್ಲ; ಅದು ಸಾಮಾಜಿಕ ಚಳವಳಿಯಾಗಿದೆ. ಕನಿಷ್ಠ ಒಬ್ಬ ಅನಕ್ಷರಸ್ಥ ವ್ಯಕ್ತಿಗೆ ಓದಲು ಮತ್ತು ಬರೆಯಲು ಕಲಿಸುವ ಸಂಕಲ್ಪವನ್ನು ಪ್ರತಿಯೊಬ್ಬರೂ ಮಾಡಬೇಕು.
> - ಎಸ್.ಎಸ್. ಕುರಿಯವರ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ, ಗದಗ

ಕಾರ್ಯಕ್ರಮದ ನಿರೂಪಣೆಯನ್ನು ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಕಾರ್ಯಕ್ರಮ ಸಹಾಯಕ ಅಶೋಕ ಹಾದಿ ಮಾಡಿದರು. ದೈಹಿಕ ಶಿಕ್ಷಕ ಎಸ್. ಮುಳಗುಂದ ಅವರು ಧ್ವಜಾರೋಹಣ ಕಾರ್ಯಕ್ರಮಕ್ಕೆ ಸಹಕಾರ ನೀಡಿದರು. ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೆ.ವೈ. ವಿಬೂತಿ ವಂದನಾರ್ಪಣೆ ಮಾಡಿದರು.

## ಗಣೇಶೋತ್ಸವಕ್ಕೆ ಏಕ ಗವಾಕ್ಷಿ ವ್ಯವಸ್ಥೆ; 24 ಗಂಟೆಯಲ್ಲೇ ಪರವಾನಗಿ!

ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಾದ್ಯಂತ ಗೌರಿ-ಗಣೇಶ ಹಬ್ಬವನ್ನು ಶಾಂತಿಯುತವಾಗಿ, ಸುವ್ಯವಸ್ಥಿತವಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸುವ ಉದ್ದೇಶದಿಂದ ಪ್ರತಿ ತಾಲೂಕಿನ ವ್ಯಾಪ್ತಿಯ ಪೊಲೀಸ್ ಠಾಣೆಗಳಲ್ಲಿ ಏಕ ಗವಾಕ್ಷಿ ಸಮಿತಿಗಳನ್ನು ರಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದ್ದಾರೆ.



ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ವಿಗ್ರಹ ಪ್ರತಿಷ್ಠಾಪನೆ ಹಾಗೂ ಮೆರವಣಿಗೆ ಮೂಲಕ ವಿಸರ್ಜನೆ ನಡೆಯಲಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯೊಂದಿಗೆ ಅಗ್ನಿಶಾಮಕ, ಲೋಕೋಪಯೋಗಿ, ವಿದ್ಯುತ್, ನಗರಾಭಿವೃದ್ಧಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನಗರ/ಗ್ರಾಮೀಣ ಸ್ಥಳೀಯ ಸಂಸ್ಥೆಗಳು ಹಾಗೂ ಕಂದಾಯ ಇಲಾಖೆಗಳನ್ನು ಒಳಗೊಂಡ ಏಕ ಗವಾಕ್ಷಿ ಸಮಿತಿ ರಚಿಸಲಾಗಿದೆ.

ಸಂಬಂಧಪಟ್ಟ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಸಮಿತಿಯ ಅಧ್ಯಕ್ಷರಾಗಿದ್ದು, ತಾಲೂಕಿನ ತಹಶೀಲ್ದಾರರು ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ. ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಗಣೇಶೋತ್ಸವಕ್ಕೆ ಸಂಬಂಧಿಸಿದ ಅರ್ಜಿಗಳನ್ನು ತ್ವರಿತವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲಿವೆ.

ಗಣೇಶ ವಿಗ್ರಹ ಪ್ರತಿಷ್ಠಾಪನೆಗೆ ಸಲ್ಲಿಸುವ ಅರ್ಜಿಗಳ ಕುರಿತು ಸಂಬಂಧಪಟ್ಟ ಇಲಾಖೆಗಳು ತಮ್ಮ ಅಭಿಪ್ರಾಯ ನೀಡಲಿದ್ದು, ಅರ್ಜಿ ಸ್ವೀಕರಿಸಿದ 24 ಗಂಟೆಗಳೊಳಗಾಗಿ ಅರ್ಜಿದಾರರಿಗೆ ಪರವಾನಗಿ ನೀಡುವಂತೆ ಕ್ರಮ ಕೈಗೊಳ್ಳಲಾಗುವುದು.

ಸಮಿತಿಯ ಸದಸ್ಯ ಇಲಾಖೆಗಳು ಪರಸ್ಪರ ನಿರಂತರ ಸಂಪರ್ಕದಲ್ಲಿದ್ದು, ಹಬ್ಬದ ಸಂದರ್ಭದಲ್ಲಿ ತಮ್ಮ ಕೇಂದ್ರ ಸ್ಥಾನಗಳಲ್ಲಿ ಹಾಜರಿದ್ದು ಕಡ್ಡಾಯವಾಗಿ ಕರ್ತವ್ಯ ನಿರ್ವಹಿಸಬೇಕು. ಪರವಾನಗಿ ನೀಡುವ ಮುನ್ನ ಆಯೋಜಕರಿಂದ ನ್ಯಾಯಾಲಯದ ನಿರ್ದೇಶನಗಳು ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಸೂಚನೆಗಳನ್ನು ಪಾಲಿಸುವ ಕುರಿತು ಮುಚ್ಚಳಿಕೆ ಪಡೆಯಬೇಕು. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಬಗ್ಗೆಯೂ ಆಯೋಜಕರಿಂದ ಖಾತರಿ ಪಡೆಯಬೇಕು.

ಸಾರ್ವಜನಿಕ ಸುರಕ್ಷತೆ ಹಾಗೂ ಪರಿಸರ ಮಾಲಿನ್ಯ ಉಂಟಾಗದ ರೀತಿಯಲ್ಲಿ ಕಾರ್ಯಕ್ರಮ ಆಯೋಜಿಸುವಂತೆ ಸೂಚಿಸಲಾಗುವುದು. ಅಗತ್ಯವಿರುವ ಸ್ಥಳಗಳಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿಕೊಳ್ಳಬೇಕು.

ಹೈ-ಟೆನ್ಶನ್ ವಿದ್ಯುತ್ ತಂತಿಗಳು ಹಾದುಹೋಗಿರುವ ಪ್ರದೇಶಗಳಲ್ಲಿ ಯಾವುದೇ ಕಾರಣಕ್ಕೂ ಗಣೇಶ ವಿಗ್ರಹ ಪ್ರತಿಷ್ಠಾಪನೆಗೆ ಅನುಮತಿ ನೀಡಬಾರದು. ಸಾರ್ವಜನಿಕ ಸ್ಥಳಗಳಲ್ಲಿ ವಿಗ್ರಹ ಪ್ರತಿಷ್ಠಾಪಿಸುವ ಸಂಘ-ಸಂಸ್ಥೆಗಳು ಸ್ಥಳೀಯ ಸಂಸ್ಥೆ ಹಾಗೂ ಪೊಲೀಸ್ ಇಲಾಖೆಯಿಂದ ಅಗತ್ಯ ಅನುಮತಿ ಪಡೆದ ನಂತರವೇ ಪ್ರತಿಷ್ಠಾಪಿಸಬೇಕು.

ಗಣೇಶೋತ್ಸವಕ್ಕೂ ಮುನ್ನ ನಾಗರಿಕ ಸಮಿತಿ, ಮೊಹಲ್ಲಾ ಸಮಿತಿ, ಕಾವಲು ಸಮಿತಿ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಮುಖಂಡರನ್ನು ಒಳಗೊಂಡ ಕೋಮು ಸೌಹಾರ್ದ ಸಭೆಗಳನ್ನು ಆಯೋಜಿಸಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸಾರ್ವಜನಿಕರು, ಸಂಘ-ಸಂಸ್ಥೆಗಳು ಹಾಗೂ ಗಣೇಶೋತ್ಸವ ಆಯೋಜಕರು ಆಡಳಿತ ಮತ್ತು ಪೊಲೀಸ್ ಇಲಾಖೆ ನೀಡುವ ಎಲ್ಲ ಮಾರ್ಗಸೂಚಿ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸಿ ಶಾಂತಿಯುತವಾಗಿ ಹಬ್ಬ ಆಚರಿಸಲು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# ಶಿಕ್ಷಕರ ಸಮ್ಮೇಳನಕ್ಕೆ ಡಾ. ನಿಂಗು ಸೊಲಗಿ ಸರ್ವಾಧ್ಯಕ್ಷ



**ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತ್ತಗಿರಿ ಫೌಂಡೇಶನ್ (ರಿ), ಕಳಸಾಪೂರ ಗದಗ ವತಿಯಿಂದ ಶಿಕ್ಷಕರ ದಿನಾಚರಣೆ ಅಂಗವಾಗಿ ಪ್ರತಿವರ್ಷದಂತೆ ಈ ವರ್ಷವೂ ಶಿಕ್ಷಕರ ಸಮ್ಮೇಳನ ಆಯೋಜಿಸಲಾಗುತ್ತಿದೆ.

ಸಮ್ಮೇಳನದ ಅಂಗವಾಗಿ ರಾಜ್ಯಮಟ್ಟದ ವಿಚಾರ ಸಂಕಿರಣ, ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಹಾಗೂ ಉತ್ತಮ ಜಿಲ್ಲಾ ಶಿಕ್ಷಕ ಪ್ರಶಸ್ತಿ ಪ್ರದಾನ, ಪುಸ್ತಕ ಬಿಡುಗಡೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಈ ವರ್ಷದ ಶಿಕ್ಷಕರ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಮುಂಡರಗಿಯ ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕ ಹಾಗೂ ಮಕ್ಕಳ ಸಾಹಿತಿ ಡಾ. ನಿಂಗು ಸೊಲಗಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಕಪ್ಪತ್ತಗಿರಿ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಎಂ. ಇಟಗಿಮಠ ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ರಾಜ್ಯಮಟ್ಟದ ಶೈಕ್ಷಣಿಕ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಡಾ. ನಿಂಗು ಸೊಲಗಿ ಅವರಿಗೆ ಅಧಿಕೃತ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಕಪ್ಪತ್ತಗಿರಿ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಎಂ. ಇಟಗಿಮಠ, ತೋಟಯ್ಯ ಗುಡ್ಡಿಮಠ, ಕಾವ್ಯಾ ಅಂಗಡಿ, ಮಂಜುನಾಥ ಮುಧೋಳ ಹಾಗೂ ಚಂದ್ರಶೇಖರ ಮಜ್ಜಗಿ ಉಪಸ್ಥಿತರಿದ್ದರು.

# ಮುದ್ದಟನೂರು ಯೂನಿಟ್‌ಗೆ ರಾಜ್ಯ ಮಟ್ಟದ ಬೆಸ್ಟ್ ಯೂನಿಟ್ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಮುದ್ದಟನೂರು**

ಎಸ್‌ಎಸ್‌ಎಫ್ ವತಿಯಿಂದ ಕೊಡಮಾಡುವ ರಾಜ್ಯ ಮಟ್ಟದ ಬೆಸ್ಟ್ ಯೂನಿಟ್ ಸಾಹಿತ್ಯೋತ್ಸವ ಪ್ರಶಸ್ತಿಗೆ ಮುದ್ದಟನೂರು ಯೂನಿಟ್ ಭಾಜನವಾಗಿದೆ.

ಎಸ್‌ಎಸ್‌ಎಫ್ ರಾಜ್ಯಾಧ್ಯಕ್ಷ ಸುಫಿಯಾನ್ ಸಖಾಫಿ, ಪ್ರಧಾನ ಕಾರ್ಯದರ್ಶಿ ಅಲಿ ತುರ್ಕಳಿಕೆ, ಕೋಶಾಧಿಕಾರಿ ಅನ್ವರ್ ಅಸದಿ ಹಾಗೂ ಸಾಹಿತ್ಯೋತ್ಸವ ಸಂಚಾಲಕ ಕೆ.ಕೆ. ಅಶ್ರಫ್ ಸಖಾಫಿ ಅವರು ಪ್ರಶಸ್ತಿ ಪ್ರದಾನ ಮಾಡಿದರು.

ಮುದ್ದಟನೂರು ಯೂನಿಟ್ ಪರವಾಗಿ ಕಾರ್ಯಕರ್ತರಾದ ಆಮಿರ್ ಬನ್ನೂರು, ರಹಮಾನ್, ಖಲಂದರ್ ಹಾಗೂ ಖುರ್ರತ್ತುಸ್ಸಾದಾತ್ ಮದರಸ ವಿದ್ಯಾರ್ಥಿಗಳು ಪ್ರಶಸ್ತಿ ಸ್ವೀಕರಿಸಿದರು.

## ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ಆಹಾರದಲ್ಲಿ ಪೌಷ್ಠಿಕಾಂಶಕ್ಕೆ ಆದ್ಯತೆ ನೀಡಿ

# ಪೌಷ್ಠಿಕ ಆಹಾರದಿಂದ ಆರೋಗ್ಯವಂತ ಸಮಾಜ ನಿರ್ಮಾಣ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ದೈನಂದಿನ ಆಹಾರದಲ್ಲಿ ಅಗತ್ಯ ಪೌಷ್ಠಿಕಾಂಶ ಇರುವಂತೆ ನೋಡಿಕೊಳ್ಳಬೇಕು. ಮಕ್ಕಳ ಶಾರೀರಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೌಷ್ಠಿಕ ಆಹಾರ ಅತ್ಯಂತ ಪ್ರಮುಖವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ ಸಿ.ಎಸ್. ಶಿವನಗೌಡರ ಹೇಳಿದರು.

ಲಕ್ಕುಂಡಿಯ ಶ್ರೀ ಅನ್ನದಾನೇಶ್ವರ ಮಠದ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಆಯುಷ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ



ಯೋಜನೆಗಳ ಸಂಯುಕ್ತಾಶ್ರಯದಲ್ಲಿ ಸೆ.9ರಂದು ಆಯೋಜಿಸಿದ್ದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪೋಷಣ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರ ಮಾತನಾಡಿ, ಸೆಪ್ಟೆಂಬರ್‌ನಲ್ಲಿ ನಡೆಯುತ್ತಿರುವ ಪೋಷಣ ಮಾಸಾಚರಣೆಯನ್ನು 'ಹಮಾರಿ ಅಂಗನವಾಡಿ, ಹಮಾರಿ ಜಿಮ್ಮೆದಾರಿ' (ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ) ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ. ಅಂಗನವಾಡಿಗಳ ಜವಾಬ್ದಾರಿ ಕೇವಲ ಕಾರ್ಯಕರ್ತೆಯ–ರಿಗೆ ಸೀಮಿತವಾಗಿರದೆ, ಇಡೀ ಸಮಾಜದ ಜವಾಬ್ದಾರಿಯಾಗಿದೆ ಎಂದರು.

> ಮಕ್ಕಳ ಬೆಳವಣಿಗೆಯ ವಿವಿಧ ಹಂತಗಳ ಬಗ್ಗೆ ಪಾಲಕರು ವಿಶೇಷ ಗಮನಹರಿಸಿ, ಪೌಷ್ಠಿಕ ಆಹಾರ ನೀಡುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು.
> - ಸಿ.ಎಸ್. ಶಿವನಗೌಡರ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶ

ಗರ್ಭಿಣಿಯರು, ಬಾಣಂತಿಯರು, 0ರಿಂದ 6 ವರ್ಷದೊಳಗಿನ ಮಕ್ಕಳು ಹಾಗೂ ಕಿಶೋರಿಯರ ಆರೋಗ್ಯ ಮತ್ತು ಪೌಷ್ಠಿಕತೆ ಸುಧಾರಣೆಯಲ್ಲಿ ಅಂಗನವಾಡಿಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಸಿರಿಧಾನ್ಯಗಳ ಬಳಕೆ, ಶಾಲಾ ಪೂರ್ವ ಶಿಕ್ಷಣದ ಮಾದರಿಗಳು ಹಾಗೂ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಸೌಲಭ್ಯಗಳ ಕುರಿತು ಅವರು ಮಾಹಿತಿ ನೀಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಜುಬೇದಾ ಟಿಗಳೇರ ಆಯುರ್ವೇದದ ಮಹತ್ವ ವಿವರಿಸಿದರು. ಲಕ್ಕುಂಡಿ ಗ್ರಾಪಂ ಪಿಡಿಓ ಅಮೀರನಾಯಕ ನೀರು, ನೈರ್ಮಲ್ಯ ಹಾಗೂ ಪರಿಸರ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಮನವಿ ಮಾಡಿದರು.

ಪೋಷಣ ಮಾಸಾಚರಣೆ ಅಂಗವಾಗಿ ಗರ್ಭಿಣಿಯರ ಸೀಮಂತ, ಅನ್ನಪ್ರಾಶನ, ಪೌಷ್ಠಿಕ ಆಹಾರದ ಪ್ರಾತ್ಯಕ್ಷಿಕೆ, ಆರೋಗ್ಯ ತಪಾಸಣೆ, ಮಾಹಿತಿ ಕೇಂದ್ರದ ಪ್ರದರ್ಶನ ಹಾಗೂ 'ಬೇಟಿ ಬಚಾವೋ, ಬೇಟಿ ಪಡಾವೋ' ಯೋಜನೆಯಡಿ ಸಸಿ ನೆಡುವ ಕಾರ್ಯಕ್ರಮ ನಡೆಯಿತು. ಮಕ್ಕಳು ಹಣ್ಣು ತರಕಾರಿಗಳ ವೇಷಭೂಷಣ ಧರಿಸಿ ಪೌಷ್ಠಿಕ ಆಹಾರದ ಮಹತ್ವ ಸಾರಿದರು.

# ಅಮರೇಶ್ ಮಲ್ಲಣ್ಣವರಿಗೆ ಗೌರವ ಡಾಕ್ಟರೇಟ್



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ರೋಣ ತಾಲೂಕಿನ ಸವಡಿ ಗ್ರಾಮದ ಶಿಕ್ಷಣ ತಜ್ಞ, ಸಾಹಿತಿ ಹಾಗೂ ಸಮಾಜ ಸೇವಕ ಅಮರೇಶ್ ಮಲ್ಲಣ್ಣವರ ಅವರಿಗೆ ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸಿರುವ ವಿಶಿಷ್ಟ ಸೇವೆಯನ್ನು ಗುರುತಿಸಿ ಏಷ್ಯಾ ಇಂಟರ್‌ನ್ಯಾಷನಲ್ ಕಲ್ಚರ್ ರಿಸರ್ಚ್ ಯೂನಿವರ್ಸಿಟಿ ವತಿಯಿಂದ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗಿದೆ.

ಶಿಕ್ಷಣ ಕ್ಷೇತ್ರದಲ್ಲಿ ಗುಣಮಟ್ಟದ ಸುಧಾರಣೆಗೆ ಒತ್ತು ನೀಡುವುದರ ಜತೆಗೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ನಿರಂತರವಾಗಿ ಶ್ರಮಿಸುತ್ತಿರುವ ಅಮರೇಶ್ ಮಲ್ಲಣ್ಣವರ ಅವರ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ. ವಿಶೇಷವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಅವರಿಗೆ ಅಗತ್ಯ ಮಾರ್ಗದರ್ಶನ ಹಾಗೂ ಶಿಕ್ಷಣದ ಅವಕಾಶಗಳನ್ನು ವಿಸ್ತರಿಸುವ ನಿಟ್ಟಿನಲ್ಲಿ ಅವರು ಕೈಗೊಂಡಿರುವ ಕಾರ್ಯಗಳು ಪ್ರಶಸ್ತಿಗೆ ಪ್ರಮುಖ ಕಾರಣವಾಗಿವೆ.

ಇದರೊಂದಿಗೆ ಸಾಹಿತ್ಯ ಕ್ಷೇತ್ರದಲ್ಲಿಯೂ ತಮ್ಮದೇ ಆದ ಕೊಡುಗೆ ನೀಡಿರುವ ಅವರು, ಸಾಮಾಜಿಕ ಕಾಳಜಿ ಹಾಗೂ ಶಿಕ್ಷಣದ ಮಹತ್ವವನ್ನು ಜನರಲ್ಲಿ ಮೂಡಿಸುವ ನಿಟ್ಟಿನಲ್ಲಿ ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ.

ಗ್ರಾಮೀಣ ಹಿನ್ನೆಲೆಯಿಂದ ಬೆಳೆದು ಶಿಕ್ಷಣ, ಸಾಹಿತ್ಯ ಹಾಗೂ ಸಮಾಜ ಸೇವೆಯ ಮೂಲಕ ಗುರುತಿಸಿಕೊಂಡಿರುವ ಅಮರೇಶ್ ಮಲ್ಲಣ್ಣವರಿಗೆ ಗೌರವ ಡಾಕ್ಟರೇಟ್ ಲಭಿಸಿರುವುದು ಸವಡಿ ಗ್ರಾಮ ಸೇರಿದಂತೆ ರೋಣ ತಾಲೂಕಿನ ಜನರಲ್ಲಿ ಸಂತಸ ಮೂಡಿಸಿದೆ.

ಅವರ ಸಾಧನೆಗೆ ವಿವಿಧ ಗಣ್ಯರು, ಶಿಕ್ಷಣ ಪ್ರೇಮಿಗಳು, ಸಾಹಿತಿಗಳು, ಸ್ನೇಹಿತರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿಯೂ ಶಿಕ್ಷಣ ಮತ್ತು ಸಮಾಜ ಸೇವೆಯ ಕ್ಷೇತ್ರದಲ್ಲಿ ಇನ್ನಷ್ಟು ಕಾರ್ಯ ನಿರ್ವಹಿಸಲಿ ಎಂದು ಶುಭ ಹಾರೈಸಿದ್ದಾರೆ.

# ಹೆಣ್ಣುಮಕ್ಕಳ ಉನ್ನತ ಶಿಕ್ಷಣಕ್ಕಾಗಿ ಕಾಲೇಜ್ ಮಂಜೂರು ಮಾಡಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕು ಕೇಂದ್ರ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುತ್ತಿದ್ದರೂ ಗ್ರಾಮೀಣ ಭಾಗದ ಮಹಿಳಾ ವಿದ್ಯಾರ್ಥಿನಿಯ–ರಿಗೆ ಪದವಿ ಶಿಕ್ಷಣ ಪಡೆಯಲು ಸೂಕ್ತ ಅವಕಾಶಗಳ ಕೊರತೆಯಿದೆ. ಮಹಿಳಾ ಸಬಲೀಕರಣದ ದೃಷ್ಟಿಯಿಂದ ಹಗ–ರಿಬೊಮ್ಮನಹಳ್ಳಿ ತಾಲೂಕು ಕೇಂದ್ರದಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡಬೇಕು ಎಂದು ಆಗ್ರಹಿಸಿ ಪ್ರಗತಿಪರ ನಾಗ–ರಿಕರ ವೇದಿಕೆ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಿ, ಆಡಳಿತ ಸೌಧದ ಉಪ ತಹಸೀಲ್ದಾರ್ ಶಿವಕುಮಾರ್ ಅವರ ಮೂಲಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಪತ್ರಕರ್ತ ಬುಡ್ಡಿ ಬಸವರಾಜ್ ಮಾತನಾಡಿ, ತಾಲೂಕು ಕೇಂದ್ರದಲ್ಲಿ ಏಳು ಪದವಿಪೂರ್ವ ಕಾಲೇಜುಗಳಿದ್ದು, ಪ್ರತಿವರ್ಷ ಸಾವಿರಾರು ವಿದ್ಯಾರ್ಥಿನಿಯರು ಪಿಯುಸಿ ಶಿಕ್ಷಣ ಪೂರ್ಣಗೊಳಿಸುತ್ತಾರೆ. ಆದರೆ ಪದವಿ ಶಿಕ್ಷಣ ಪಡೆಯಲು ಪ್ರತ್ಯೇಕ ಮಹಿಳಾ ಕಾಲೇಜು ಇಲ್ಲದಿರುವುದು ಈ ಭಾಗದ ಪ್ರಮುಖ ಕೊರತೆಯಾಗಿದೆ ಎಂದರು. ಭೌಗೋಳಿಕವಾಗಿ ತಾಲೂಕು ಕೇಂದ್ರದಲ್ಲಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸುವ ಅಗತ್ಯವಿದೆ. ಗಂಗಾವತಿ ಭೀಮಪ್ಪ ಅವರು ಶಿಕ್ಷಣದ ಉದ್ದೇಶಕ್ಕಾಗಿ ಪಟ್ಟಣದಲ್ಲಿ ದಾನವಾಗಿ ನೀಡಿರುವ ಜಾಗದಲ್ಲಿ ವಿಶಾಲವಾದ ಸ್ಥಳಾವಕಾಶವಿದೆ. ಈ ಸ್ಥಳದಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕ ಕಾಲೇಜು ಸ್ಥಾಪಿಸಿದರೆ ಪೋಷಕರು ತಮ್ಮ ಹೆಣ್ಣುಮಕ್ಕಳನ್ನು ಧೈರ್ಯದಿಂದ ಕಾಲೇಜಿಗೆ ಕಳುಹಿಸಲು ಸಾಧ್ಯವಾಗುತ್ತದೆ. ಇದರಿಂದ ಪದವಿ ಶಿಕ್ಷಣ ಪಡೆಯುವ ಮಹಿಳೆಯರ ಸಂಖ್ಯೆ ಗಣನೀಯವಾಗಿ ಹೆಚ್ಚಲಿದೆ. ತಾಲೂಕಿನ 65ಕ್ಕೂ ಹೆಚ್ಚು ಗ್ರಾಮಗಳ ಗ್ರಾಮೀಣ ವಿದ್ಯಾರ್ಥಿನಿಯರಿಗೆ ಇದರಿಂದ ಅನುಕೂಲವಾಗಲಿದೆ ಎಂದು ಹೇಳಿದರು.

ಪ್ರಗತಿಪರ ಸಂಘಟನೆಗಳ ಸಂಚಾಲಕ ಈ. ಕೃಷ್ಣಮೂರ್ತಿ ಮಾತನಾಡಿ, ಹಗ–ರಿಬೊಮ್ಮನಹಳ್ಳಿ ತಾಲೂಕು ಇಡೀ ಜಿಲ್ಲೆಗೆ ಕೇಂದ್ರ ಸ್ಥಾನವಾಗಿರುವುದರಿಂದ ಇಲ್ಲಿಗೆ ಬರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿದೆ. ಮಹಿಳಾ ವಿದ್ಯಾರ್ಥಿನಿಯರ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮುಖಂಡ ಮುಟುಗನಹಳ್ಳಿ ಕೊಟ್ರೇಶ್ ಮಾತನಾಡಿ, ತಾಲೂಕು ಕೇಂದ್ರದಲ್ಲಿ ಸರ್ಕಾರಿ ಮಹಿಳಾ ಪ್ರಥ–'ಮ ದರ್ಜೆ ಕಾಲೇಜು ಸ್ಥಾಪನೆಯಾದರೆ ಕೊಟ್ಟೂರು, ಹಡಗಲಿ ಹಾಗೂ ಕೂಡ್ಲಿಗಿ ತಾಲೂಕುಗಳ ಕೆಲವು ಗ್ರಾಮಗಳ ವಿದ್ಯಾರ್ಥಿನಿಯರೂ ಇದರ ಸದುಪಯೋಗ ಪಡೆದುಕೊಳ್ಳಲಿದ್ದಾರೆ. ಇದು ಹೋರಾಟದ ಆರಂಭವಾಗಿದ್ದು, ಕಾಲೇಜು ಮಂಜೂರಾಗುವವರೆಗೆ ಹೋರಾಟ ನಿರಂತರವಾಗಿ ನಡೆಯಲಿದೆ. ಪಕ್ಷಾತೀತವಾಗಿ ಎಲ್ಲರೂ ಹೋರಾಟಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

> ಮಹಿಳೆಯರ ಉನ್ನತ ಶಿಕ್ಷಣಕ್ಕೆ ಅವಕಾಶ ಕಲ್ಪಿಸುವುದು ಇಂದಿನ ಅಗತ್ಯ. ಹಗರಿಬೊಮ್ಮನಹಳ್ಳಿಯಲ್ಲಿ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡುವವರೆಗೆ ಪಕ್ಷಾತೀತವಾಗಿ ಹೋರಾಟ ಮುಂದುವರಿಸುತ್ತೇವೆ.
> - ಮುಟುಗನಹಳ್ಳಿ ಕೊಟ್ರೇಶ್, ಮುಖಂಡ

ಈ ವೇಳೆ ಪುರಸಭೆ ಮಾಜಿ ಅಧ್ಯಕ್ಷ ಟಿ. ರಾಘವೇಂದ್ರ, ಡಾ. ಬಿ.ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷ ದೊಡ್ಡಬಸಪ್ಪ, ಹಿಂದುಳಿದ ಜಾತಿಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಲಿಂಗರಾಜ ಯಾದವ್, ಪುರಸಭೆ ಸದಸ್ಯ ದೀಪಕ್ ಕಠಾರೆ, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಅನಿಲ್ ಕುಮಾರ್ ಜಾಣ, ಗಣೇಶ್ ಹಾವಲ್ದಾರ್, ಎಸ್. ಎಸ್. ಎತ್ತಿನಮನಿ ಸೇರಿದಂತೆ ಹಲವರು ಮಾತನಾಡಿದರು.

ಪ್ರತಿಭಟನೆಯಲ್ಲಿ ಕಿನ್ನಾಳ ಸುಭಾಸ್, ರುದ್ರೇಶ್, ಡಿಎಸ್‌ಎಸ್ ಸಂಚಾಲಕ ಕೆಚ್ಚನಬಂಡಿ ದುರ್ಗಪ್ಪ, ಬಸವರಾಜ್, ಗನಿಸಾಬ್, ಪ್ರಕಾಶ್, ಮಾದಿಗ ಮಹಾಸಭಾ ತಾಲೂಕು ಅಧ್ಯಕ್ಷ ಎಚ್. ಲೋಕಪ್ಪ, ಸೋಮು ಭಜಂತ್ರಿ, ಐನಹಳ್ಳಿ ಸೋಮಶೇಖರ್, ಜಮಾಲ್ ಸಾಬ್, ಸಂತೋಷ್, ಬ್ಯಾಲಾ ದೊಡ್ಡಬಸಪ್ಪ, ನಿಂಗಪ್ಪ, ಮಲ್ಲಿಕಾರ್ಜುನ, ಆನಂದ್ ಯಾದವ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಹುದ್ದೆ ಅಧಿಕಾರವಲ್ಲ, ಸಮಾಜ ಸೇವೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮಾಜದ ಸಂಘಟನೆ ಬಲಗೊಳ್ಳಬೇಕಾದರೆ ಪರಸ್ಪರ ಸಹಕಾರ, ಒಗ್ಗಟ್ಟು ಹಾಗೂ ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು. ಸಂಘದ ಹುದ್ದೆಗಳನ್ನು ಅಧಿಕಾರವೆಂದು ಭಾವಿಸದೆ, ಸಮಾಜ ಸೇವೆಗೆ ದೊರೆತ ಅವಕಾಶವೆಂದು ಪರಿಗಣಿಸಿ ನೂತನ ಪದಾಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.



ಸಮೀಪದ ಜಕ್ಕಲಿ ಗ್ರಾಮದಲ್ಲಿ ರವಿವಾರ ನಡೆದ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಬಣಜಿಗ ಸಮಾಜದ ಇತಿಹಾಸ, ಪರಂಪರೆ ಹಾಗೂ ಹಿರಿಯರು ನೀಡಿರುವ ಕೊಡುಗೆಗಳನ್ನು ಅರಿತು, ಅವುಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಇಂದಿನ ಸಮಾಜದ ಮೇಲಿದೆ. ಕನ್ನಡ ನಾಡಿನ ಧಾರ್ಮಿಕ, ಸಾಂಸ್ಕೃತಿಕ, ಸಾಹಿತ್ಯಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಿಗೆ ಬಣಜಿಗ ಸಮಾಜದ ಅನೇಕ ಮಹನೀಯರು ಅಮೂಲ್ಯ ಕೊಡುಗೆ ನೀಡಿದ್ದಾರೆ. 12ನೇ ಶತಮಾನದ ಶರಣ ಚಳವಳಿಯಿಂದ ಇಂದಿನವರೆಗೂ ಸಮಾಜದ ಹಲವು ಸಾಧಕರು ತಮ್ಮ ಸೇವೆ ಮತ್ತು ಸಾಧನೆಯ ಮೂಲಕ ದಾರಿದೀಪವಾಗಿದ್ದಾರೆ ಎಂದರು.

ಅಕ್ಕಮಹಾದೇವಿಯವರ ವಚನಗಳು ಹಾಗೂ ಜೀವನಾದರ್ಶಗಳು ಇಡೀ ಮನುಕುಲಕ್ಕೆ ಸ್ಫೂರ್ತಿಯಾಗಿವೆ. ಮಕ್ಕಳಿಗೆ ಕೇವಲ ಅಕ್ಷರ ಜ್ಞಾನ ನೀಡಿದರೆ ಸಾಲದು, ಸಂಸ್ಕಾರ, ವ್ಯಕ್ತಿತ್ವ ವಿಕಸನ ಹಾಗೂ ಜೀವನ ಮೌಲ್ಯಗಳನ್ನು ಕಲಿಸುವುದು ಅಗತ್ಯ. ಮೊಬೈಲ್ ಹಾಗೂ ದೂರದರ್ಶನದ ವ್ಯಾಮೋಹದಿಂದ ಮಕ್ಕಳಿಗೆ ಪೋಷಕರು ಸಮಯ ನೀಡದಿರುವ ಪರಿಸ್ಥಿತಿ ಬದಲಾಗಬೇಕು. ಮಕ್ಕಳ ಭವಿಷ್ಯ ರೂಪಿಸುವಲ್ಲಿ ಪಾಲಕರು, ಹಿರಿಯರು ಹಾಗೂ ಶಿಕ್ಷಕರು ಹೆಚ್ಚಿನ ಜವಾಬ್ದಾರಿ ವಹಿಸಬೇಕು ಎಂದು ಸಲಹೆ ನೀಡಿದರು.

ಕಾಲಕಾಲಕ್ಕೆ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವ ಅಗತ್ಯವಿದೆ. ಜಕ್ಕಲಿಯಲ್ಲಿ ಆರೋಗ್ಯ ಶಿಬಿರ ಆಯೋಜಿಸಿದರೆ ತಮ್ಮಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದ ಅವರು, ವಿವಿಧ ತಜ್ಞ ವೈದ್ಯರನ್ನು ಕರೆಸುವುದು ಹಾಗೂ ಅಗತ್ಯ ಔಷಧಗಳ ವ್ಯವಸ್ಥೆಗೂ ನೆರವಾಗುವುದಾಗಿ ಭರವಸೆ ನೀಡಿದರು.

ರೋಣ ತಾಲೂಕು ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಮುತ್ತಣ್ಣ ಸಂಗಳದ ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಅತಿಥಿಯಾಗಿ ಮಾತನಾಡಿದ ಚನ್ನಮಲ್ಲಪ್ಪ ಗದುಗಿನ, ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಸದಸ್ಯತ್ವ ಪಡೆದು ಸಂಘಟನೆಯನ್ನು ಮತ್ತಷ್ಟು ಬಲಪಡಿಸುವಂತೆ ಮನವಿ ಮಾಡಿದರು.

ನೂತನ ಪದಾಧಿಕಾರಿಗಳಿಗೆ ನರೇಗಲ್ಲ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಪ್ರಮಾಣ ವಚನ ಬೋಧಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ, ಅಟ್ಯಾಪಟ್ಯಾ ಕ್ರೀಡಾಪಟು ಪ್ರೀತಿ ಬುಳ್ಳಾ ಹಾಗೂ ಎಸ್‌ಎಸ್–ಎಲ್‌ಸಿಯಲ್ಲಿ ಹೆಚ್ಚಿನ ಅಂಕ ಗಳಿಸಿದ ಅನ್ನದಾನೇಶ ಮೆಣಸಗಿ ಅವರನ್ನು ಸಮಾಜದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸಂಘದ ಅಧ್ಯಕ್ಷ ಟಿ.ಎ. ಕಡಗದ ಅಧ್ಯಕ್ಷತೆ ವಹಿಸಿದ್ದರು. ಪ್ರವೀಣ ವಾಲಿ ಪ್ರಾರ್ಥಿಸಿದರು. ಮುತ್ತಣ್ಣ ಕಡಗದ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಕಾಶ ವಾಲಿ ಸ್ವಾಗತಿಸಿದರು. ಪ್ರಕಾಶಪ್ಪ ಹೊಸಮನಿ ನಿರೂಪಿಸಿದರು.

ವೇದಿಕೆಯಲ್ಲಿ ಜಿ.ಎ. ಬೆಲ್ಲದ, ಅಶೋಕಪ್ಪ ಯಾವಗಲ್ಲ, ಡಾ. ಎ.ವಿ. ನರೇಗಲ್ಲ, ನೂತನ ಅಧ್ಯಕ್ಷ ಚನ್ನಬಸಪ್ಪ ಸೂಡಿ, ವೀರಪ್ಪ ಪಟ್ಟಣಶೆಟ್ಟಿ, ಅನಿಲಕುಮಾರ ಹೊಸಮನಿ, ವೀರಪ್ಪ ಅಕ್ಕಿಶೆಟ್ಟರ, ಶರಣಬಸಪ್ಪ ಪಟ್ಟಣಶೆಟ್ಟಿ, ಮಹಾದೇವಪ್ಪ ಮೆಣಸಗಿ, ಸುಭಾಷಚಂದ್ರ ಕುದರಿ, ವೀರಪ್ಪ ವಾಲಿ ಸೇರಿದಂತೆ ಸಮಾಜದ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

> ಸಂಘದ ಹುದ್ದೆಗಳನ್ನು ಅಧಿಕಾರವೆಂದು ಭಾವಿಸದೆ, ಸಮಾಜ ಸೇವೆಗೆ ದೊರೆತ ಅವಕಾಶವೆಂದು ಪರಿಗಣಿಸಿ ನೂತನ ಪದಾಧಿಕಾ–ರಿಗಳು ಕಾರ್ಯನಿರ್ವಹಿಸಬೇಕು. ಪರಸ್ಪರ ಸಹಕಾರ ಮತ್ತು ಒಗ್ಗಟ್ಟಿನಿಂದ ಸಮಾಜದ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು.
> - ಕೆ.ಎ. ಬಳಿಗೇರ, ಅಧ್ಯಕ್ಷರು, ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್

# ದಾಖಲೆ ನೀಡಿ ಹೆಸರು ಖಚಿತಪಡಿಸಿಕೊಳ್ಳಲು ಸೂಚನೆ ನೋ–ಮ್ಯಾಪಿಂಗ್ ಮತದಾರರಿಗೆ ನೋಟಿಸ್

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ಪಟ್ಟಣ ಪಂಚಾಯಿತಿಯ ಹಳೆ ಕಚೇರಿಯಲ್ಲಿ ಬುಧವಾರ ನೋ–ಮ್ಯಾಪಿಂಗ್ ಹಾಗೂ ಅನಾಮಲೀಸ್ ಪಟ್ಟಿಯಲ್ಲಿರುವ ಮತದಾರರ ವಿಚಾರಣೆ ಕೇಂದ್ರಕ್ಕೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಭೇಟಿ ನೀಡಿ ಪರಿಶೀಲಿಸಿದರು.

ನಂತರ ಮಾತನಾಡಿದ ಅವರು, ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ನೋ–ಮ್ಯಾಪಿಂಗ್ ಪಟ್ಟಿಯಲ್ಲಿ 1,606 ಹಾಗೂ ಅನಾಮಲೀಸ್ ಪಟ್ಟಿಯಲ್ಲಿ 4,197 ಮತದಾರರು ಸೇರಿದಂತೆ ಒಟ್ಟು 5,803 ಮತದಾರರಿದ್ದಾರೆ. ಈ ಪ್ರಕರಣಗಳ ವಿಲೇವಾರಿಗೆ ಶಿರಹಟ್ಟಿ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳ ತಹಶೀಲ್ದಾರರು ಸೇರಿದಂತೆ ಒಟ್ಟು 16 ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು.




ಈ ಪೈಕಿ ಈಗಾಗಲೇ 998 ಮತದಾರರ ಪ್ರಕರಣಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿದ್ದು, ಇಲ್ಲಿಯವರೆಗೆ 386 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಬಾಕಿ ಉಳಿದಿರುವ ಮತದಾರರಿಗೆ ಆಯಾ ಮತಗಟ್ಟೆ ವ್ಯಾಪ್ತಿಯ ಬಿಎಲ್‌ಒಗಳ ಮೂಲಕ ನೋಟಿಸ್ ನೀಡಲಾಗಿದ್ದು, ಸಂಬಂಧಿಸಿದ ಸಹಾಯಕ ಮತದಾರರ ನೋಂದಣಾಧಿಕಾರಿಗಳು ನೋಟಿಸ್ ಪಡೆದ ಮತದಾರರ ವಿಚಾರಣೆ ನಡೆಸುತ್ತಿದ್ದಾರೆ ಎಂದರು.

ನೋಟಿಸ್ ಪಡೆದಿರುವ ಮತದಾರರು ತಮಗೆ ನಿಗದಿಪಡಿಸಿದ ದಿನಾಂಕದಂದು ವಿಚಾರಣೆಗೆ ಕಡ್ಡಾಯವಾಗಿ ಹಾಜರಾಗಿ, ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಈ ಮೂಲಕ ಅಂತಿಮ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಯಾಗುವಂತೆ ನೋಡಿಕೊಳ್ಳಬೇಕು ಎಂದು ನಂದಾ ಹಣಬರಟ್ಟಿ ಮನವಿ ಮಾಡಿದರು.

ನಂತರ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನಿಲೇಶ ಹಾದಿಮನಿ ಅವರು ಶಿರಹಟ್ಟಿಯಲ್ಲಿ ವಿತರಿಸಲಾಗಿದ್ದ ನೋಟಿಸ್‌ಗಳಿಗೆ ಸಂಬಂಧಿಸಿದ ಮತದಾರರ ವಿಚಾರಣೆ ನಡೆಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka